ಸಂಪುಟ : 10 ಸಂಚಿಕೆ: 148 ಪುಟ : 4+2 ಬೆಲೆ: 3.00 ಬುಧವಾರ ಜುಲೈ 16 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 148 Pages : 4+2 Price : 3.00 Wednesday July 16 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಎಸ್ಪಿ ಬಿಎಸ್ ನೇಮಗೌಡ ವರ್ಗಾವಣೆ; ರೋಹನ್ ಜಗದೀಶ್ ನೂತನ ಎಸ್ಪಿ!



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ ಅವರನ್ನು ರಾಜ್ಯ ಸರ್ಕಾರ ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ.

ಸೋಮವಾರ ರಾತ್ರಿ 35ಜನ ಐಪಿಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದ್ದು, ಅದರಲ್ಲಿ ಗದಗ ಜಿಲ್ಲಾ ಎಸ್ಪಿ ಬಿ.ಎಸ್ ನೇಮಗೌಡ ಅವರನ್ನು ಬೆಂಗಳೂರಿನ ಮಹಾನಗರದ ಉತ್ತರ ವಿಭಾಗದ ಡೆಪ್ಯೂಟಿ ಕಮಿಷನರ್ ಹುದ್ದೆಗೆ ನೇಮಕ ಮಾಡಿ ಆದೇಶ ಮಾಡಲಾಗಿದೆ. ಹಾಗೆಯೇ ಗದಗ ಜಿಲ್ಲೆಗೆ ನೂತನ ಎಸ್ಪಿಯನ್ನಾಗಿ ಬೆಳಗಾವಿಯಲ್ಲಿ ಲಾ ಆ್ಯಂಡ್ ಆರ್ಡರ್‌ನ ಡೆಪ್ಯೂಟಿ ಕಮಿಷನರ್ ಆಗಿದ್ದ ಕರ್ನಾಟಕ ಕೇಡರ್‌ನ 2019ರ ಬ್ಯಾಚ್ ನ ರೋಹನ್ ಜಗದೀಶ್ ಅವರನ್ನು ನೇಮಕ ಮಾಡಿ ಆದೇಶ ಮಾಡಲಾಗಿದೆ.

ಕಳೆದ ಎರಡೂವರೆ ವರ್ಷಗಳಿಂದ ಗದಗ ಜಿಲ್ಲೆಯ ಇಲಾಖೆಯಲ್ಲಿ ಹಾರ್ಡ್ ವರ್ಕರ್ ಎಂದೇ ಹೆಸರಾಗಿದ್ದ ಬಾಬಾಸಾಹೇಬ್ ನೇಮಗೌಡ ಅವರು ಎಸ್ಪಿ ಕಚೇರಿ ಆವರಣದ ಅಭಿವೃದ್ಧಿ, ಕಚೇರಿಯ ಮುಂದಿನ ರಸ್ತೆಗೆ ಡಾಂಬರೀಕರಣ, ವಿವಿಧ ಸರ್ಕಲ್‌ಗಳಲ್ಲಿ ವಾಹನ ಸವಾರರಿಗೆ ನೆರಳು ಪರದೆ ಮಾಡಿದ್ದನು ಸಾರ್ವಜನಿಕರು ಮರೆಯುಂತಿಲ್ಲ. ಬಿ ಎಸ್ ನೇಮಗೌಡ ಅವರು ಸಾರ್ವಜನಿಕರೊಂದಿಗೆ ಸೌಮ್ಯದಿಂದಲೇ ವರ್ತಿಸುತ್ತಿದ್ದ ಅವರು, ಜಿಲ್ಲೆಯ ಸಾರ್ವಜನಿಕ ವಲಯದಲ್ಲಿ ಮನೆ ಮಾತಾಗಿದ್ದರು.

ಗದಗ ಜಿಲ್ಲೆಯ ನೂತನ ಎಸ್ಪಿ ರೋಹನ್ ಜಗದೀಶ್ ಮಂಗಳವಾರ ಸಂಜೆ ಅಧಿಕಾರ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ಠಾಣೆಯ ಅಧಿಕಾರಿಗಳಿದ್ದರು.

## ಜು.19ಕ್ಕೆ ಪತ್ರಿಕಾ ದಿನಾಚರಣೆ, ರಕ್ತದಾನ ಶಿಬಿರ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಾ ಪತ್ರಕರ್ತರ ಸಂಘದಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ಜು. 19ರಂದು ಶನಿವಾರ ಬೆಳಿಗ್ಗೆ 9.30ಕ್ಕೆ ಪಟ್ಟಣದ ಸರ್ಕಾರಿ ಆಸ್ಪತ್ರೆಯ ಸಭಾಭವನದಲ್ಲಿ ಸಮುದಾಯ ಆರೋಗ್ಯ ಕೇಂದ್ರ ಮತ್ತು ವಿವಿಧ ಸಂಘಟನೆಗಳ ಸಹಯೋಗದಲ್ಲಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕಾ ಪತ್ರಕರ್ತರ ಸಂಘದ ಅಧ್ಯಕ್ಷ ಮಲ್ಲು ಕಳಸಾಪುರ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಂಗಳವಾರ

▶▶ 3ನೇ ಪುಟಕ್ಕೆ

### ರೈತ ಹೋರಾಟಗಾರರು, ಭೂ ಹೋರಾಟಗಾರರ ಪರವಾಗಿ ಗಟ್ಟಿ ನಿಲುವು ತಳೆದ ಸಿಎಂ ಸಿದ್ದರಾಮಯ್ಯ

# ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಟ್ಟ ಸರ್ಕಾರ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೇವನಹಳ್ಳಿ ತಾಲೂಕು ಚನ್ನರಾಯಪಟ್ಟಣ ಹಾಗೂ ಇತರ ಗ್ರಾಮಗಳಲ್ಲಿನ ಭೂಸ್ವಾಧೀನ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಕೈಬಿಟ್ಟಿದ್ದೇವೆ. ಕೆಲವು ರೈತರು ಜಮೀನು ನೀಡಲು ಸಿದ್ಧರಿರುವುದಾಗಿ ಮುಂದೆ ಬಂದಿದ್ದಾರೆ. ಜಮೀನು ನೀಡಲು ಇಚ್ಛಿಸುವವರ ಜಮೀನುಗಳನ್ನು ಸರ್ಕಾರ ಸ್ವಾಧೀನಪಡಿಸಿಕೊಳ್ಳಲಿದ್ದು, ಅವರಿಗೆ ಹೆಚ್ಚಿನ ಪರಿಹಾರ ಮತ್ತು ಅಭಿವೃದ್ಧಿಪಡಿಸಿದ ಜಮೀನು ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಮಂಗಳವಾರ ವಿಧಾನಸೌಧದ ಸಭಾಂಗಣದಲ್ಲಿ ನಡೆದ ದೇವನಹಳ್ಳಿ ತಾಲೂಕು ಚನ್ನರಾಯಪಟ್ಟಣ ಹಾಗೂ ಇತರ ಗ್ರಾಮಗಳಲ್ಲಿನ ಭೂಸ್ವಾಧೀನ ಪ್ರಕ್ರಿಯೆಗೆ ಸಂಬಂಧಪಟ್ಟಂತೆ ಅಧಿಕಾರಿಗಳ ಹಾಗೂ ರೈತ ಮುಖಂಡರ ಸಭೆಯ ಬಳಿಕ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡುತ್ತಿದ್ದರು.

ದೇವನಹಳ್ಳಿ ತಾಲೂಕು ಬೆಂಗಳೂರಿಗೆ ಹತ್ತಿರದ್ದಲ್ಲಿದ್ದು, ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಅಲ್ಲಿಯೇ ಇದೆ. ರಾಜ್ಯದ ಪ್ರತಿಯೊಬ್ಬರ ವರಮಾನ ಹೆಚ್ಚಳವಾಗಬೇಕಿದ್ದರೆ ಅಭಿವೃದ್ಧಿ ಕಾರ್ಯ ನಡೆಯಬೇಕಿದೆ. ಹೊಸ ಕೈಗಾರಿಕೆಗಳ ಪ್ರಾರಂಭಕ್ಕೆ, ಬಂಡವಾಳ ಹೂಡಿಕೆಗೆ ಜಮೀನಿನ ಅಗತ್ಯವಿದೆ. ಜಮೀನು



ಸ್ವಾಧೀನಪಡಿಸಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಸಹಕಾರ ನೀಡಬೇಕಾಗುತ್ತದೆ. ದೇವನಹಳ್ಳಿ ತಾಲೂಕಿನಲ್ಲಿ 1777 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಂಡು, ಅಲ್ಲಿ ಏರೋಸ್ಪೇಸ್ ಪ್ರಾರಂಭಿಸುವುದು ಸರ್ಕಾರದ ಉದ್ದೇಶವಾಗಿದೆ. ಬೆಂಗಳೂರಿನ ಸಮೀಪದಲ್ಲಿ ಇದಕ್ಕೆ ಜಮೀನು ಒದಗಿಸಲು ಕೋರಿಕೆ ಸ್ವೀಕರಿಸಲಾಗಿತ್ತು ಎಂದು ತಿಳಿಸಿದರು.

ಯಾವುದೋ ಕಾರಣಕ್ಕೆ ಜಮೀನು ಸ್ವಾಧೀನ ಕೈಬಿಟ್ಟರೆ ಈ ಕೈಗಾರಿಕೆಗಳು ಬೇರೆ ಕಡೆ ಹೋಗುವ ಸಾಧ್ಯತೆ ಇದೆ. ಆದರೂ ಸರ್ಕಾರ ರೈತಪರವಾಗಿದ್ದು, ಅವರ ಬೇಡಿಕೆಗಳನ್ನು ಪರಿಗಣಿಸಿ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡಲು ನಿರ್ಧರಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

> ರಾಜ್ಯದಲ್ಲಿ ಭೂಸ್ವಾಧೀನದ ವಿರುದ್ಧ ಈ ಮಟ್ಟದ ಪ್ರತಿಭಟನೆ ನಡೆದಿಲ್ಲ. ಅದು ಫಲವತ್ತಾದ ವ್ಯವಸಾಯಕ್ಕೆ ಯೋಗ್ಯವಾದ ಭೂಮಿ. ಅಲ್ಲಿನ ರೈತರು ಆ ಜಮೀನಿನ ಮೇಲೆ ಹೆಚ್ಚು ಅವಲಂಬಿತರಾಗಿದ್ದಾರೆ. ಆದ್ದರಿಂದ ಭೂಸ್ವಾಧೀನ ಪ್ರಕ್ರಿಯೆ ಕೈಬಿಡಬೇಕೆಂದು ಹೋರಾಟಗಾರರು ಸ್ಪಷ್ಟಪಡಿಸಿದ್ದಾರೆ. ಸರ್ಕಾರ ರೈತರು, ಜಮೀನುದಾರರು ಸೇರಿದಂತೆ ಎಲ್ಲರ ಅಹವಾಲುಗಳನ್ನು ಆಲಿಸಿದೆ. ರಾಜ್ಯದ ಅಭಿವೃದ್ಧಿಗೆ, ಬೆಳವಣಿಗೆಗೆ ಕೈಗಾರಿಕೆಗೆ ಉತ್ತೇಜನ ನೀಡುವ ಅಗತ್ಯವೂ ಇದೆ.
>
> – ಸಿದ್ದರಾಮಯ್ಯ. ಮುಖ್ಯಮಂತ್ರಿಗಳು.

ಸಚಿವರಾದ ಎಂ.ಬಿ. ಪಾಟೀಲ್, ಕೆ.ಎಚ್. ಮುನಿಯಪ್ಪ, ಹೆಚ್.ಕೆ. ಪಾಟೀಲ್, ಕೃಷ್ಣ ಭೈರೇಗೌಡ, ಪ್ರಿಯಾಂಕ ಖರ್ಗೆ, ಭೈರತಿ ಸುರೇಶ್, ಮುಖ್ಯಮಂತ್ರಿ ಅವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಕಾನೂನು ಸಲಹೆಗಾರ ಪೊನ್ನಣ್ಣ, ಅಡ್ವಕೇಟ್ ಜನರಲ್ ಶಶಿಕಿರಣ ಶೆಟ್ಟಿ ಸೇರಿದಂತೆ ರೈತ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ಬೆಣ್ಣೆಹಳ್ಳದ ಪ್ರವಾಹ ಪೀಡಿದ ಪ್ರದೇಶಕ್ಕೆ ಕೇಂದ್ರ ತಂಡ ಭೇಟಿ

# 2.517 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿ

■ ವಿಜಯಸಾಕ್ಷಿ ಸುದ್ದಿ, ರೋಣ

ಮುಂಗಾರು ಪೂರ್ವ ಮಳೆಯಿಂದ ಬೆಣ್ಣೆಹಳ್ಳ ತುಂಬಿ ಪ್ರವಾಹ ಪೀಡಿತ ಗ್ರಾಮಗಳ ಜಮೀನುಗಳಿಗೆ ನೀರು ನುಗ್ಗಿ ಬೆಳೆಗಳಿಗೆ ಅಪಾರ ಹಾನಿ ಸಂಭವಿಸಿತ್ತು. ಈ ಹಿನ್ನೆಲೆಯಲ್ಲಿ ಕೇಂದ್ರ ಸರಕಾರದ ಎನ್‌ಡಿಆರ್‌ಎಫ್ ತಂಡ ಮಂಗಳವಾರ ಪ್ರವಾಹ ಪೀಡಿತ ಗ್ರಾಮಗಳಿಗೆ ಭೇಟಿ ನೀಡಿ ರೈತರ ಸಮಸ್ಯೆಗಳನ್ನು ಆಲಿಸಿದರು.

ಮಂಗಳವಾರ ಸಂಜೆ ಪ್ರವಾಹ ಪೀಡಿತ ಯಾವಗಲ್ಲ ಗ್ರಾಮ ಸೇರಿದಂತೆ ಇತರ ಗ್ರಾಮಗಳಿಗೆ ಭೇಟಿ ನೀಡಿದ ಕೇಂದ್ರ ತಂಡ ವಾಸ್ತವ ಸ್ಥಿತಿಯ ಪರಿಶೀಲನೆ ನಡೆಸಿತು. ಈ ಸಂದರ್ಭದಲ್ಲಿ ತಹಸೀಲ್ದಾರ ನಾಗರಾಜ ಕೆ, ಕೃಷಿ ಅಧಿಕಾರಿ ಬಿ.ಆರ್. ಫಾಲಾಕ್ಷಗೌಡ ಅವರಿಂದ ಬೆಳೆಗಳ ಬಗ್ಗೆ ಅಗತ್ಯ ಮಾಹಿತಿ ಪಡೆದರು.

ಬೆಣ್ಣೆಹಳ್ಳಕ್ಕೆ ಕೇಂದ್ರ ತಂಡ ಭೇಟಿ ನೀಡುತ್ತಿದ್ದಂತೆ ಗ್ರಾಮದ ರೈತರು



ಹಳ್ಳದ ರಭಸಕ್ಕೆ ಆಗಿರುವ ಹಾನಿಯನ್ನು ವಿವರಿಸತೊಡಗಿದರು. ಪ್ರತಿ ಬಾರಿಯೂ ಇದೇ ರೀತಿ ಸಮಸ್ಯೆಯಾಗುತ್ತಿದೆ, ಇದರ ಕುರಿತು ಶಾಶ್ವತ ಪರಿಹಾರ ಕೈಗ್ವೆಂಡು ರೈತರನ್ನು ಕಾಪಡಬೇಕು ಎಂದು ತಮ್ಮ ಅಳಲು ತೋಡಿ–ಕೊಂಡರು. ಸೇತುವೆಯ ಎತ್ತರ ಹೆಚ್ಚಿಸಬೇಕು, ಬೆಣ್ಣೆಹಳ್ಳದ ಹೂಳು ತೆಗೆಯಬೇಕು, ಬೆಳೆಹಾನಿಗೆ ಸೂಕ್ತ ಪರಿಹಾರವನ್ನು ವಿತರಿಸಬೇಕು ಎಂದು ರೈತರು ವಿನಂತಿಸಿದರು. ತಹಸೀಲ್ದಾರ

> ಪ್ರವಾಹ ಪೀಡಿತ ಗ್ರಾಮಗಳಿಗೆ ಮಂಗಳವಾರ ಸಂಜೆ ಕೇಂದ್ರ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಬೆಣ್ಣೆಹಳ್ಳದ ಪ್ರವಾಹದಿಂದ 2.517 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾದ ಬಗ್ಗೆ ವರದಿಯನ್ನು ಸಲ್ಲಿಸಲಾಗಿದೆ. ಅಲ್ಲದೆ ಕೇಂದ್ರ ತಂಡ ಕೇಳಿದ ಮಾಹಿತಿಗಳನ್ನು ಸಹ ಒದಗಿಸಲಾಗಿದೆ.
>
> **– ಬಿ.ಆರ್. ಫಾಲಾಕ್ಷಗೌಡ.** ಉಪ ನಿರ್ದೇಶಕರು, ಕೃಷಿ ಇಲಾಖೆ.

ನಾಗರಾಜ ಕೆ, ಕೃಷಿ ಉಪನಿರ್ದೇಶಕ ಬಿ.ಆರ್. ಫಾಲಾಕ್ಷಗೌಡ, ಸಹಾಯಕ ಕೃಷಿ ನಿರ್ದೇಶಕ ಎಸ್.ಎಫ್. ತಹಸೀಲ್ದಾರ, ರೈತರಾದ ಮುತ್ತಣ್ಣ ಕುರಿ, ಮುದ್ದಣ್ಣ ನವಲಗುಂದ, ಶಂಕ್ರಪ್ಪ ಬ್ಯಾಟಿ, ಈರಣ್ಣ ಕುಂಬಾರ, ಮಂಜು, ಈರಣ್ಣ ಸೇರಿದಂತೆ ನೂರಾರು ರೈತರು ಮತ್ತು ಅಧಿಕಾರಿಗಳು ಉಪಸ್ಥಿತರಿದ್ದರು.

### ಲಿಂಗತ್ವ ಅಲ್ಪಸಂಖ್ಯಾತರ ರಾಜ್ಯ ಕಲ್ಯಾಣ ಮಂಡಳಿ ನಿಗಮ ಸ್ಥಾಪನೆಗೆ ಉಮಾ ಪಿ ಒತ್ತಾಯ

## ಲಿಂಗತ್ವ ಅಲ್ಪಸಂಖ್ಯಾತರ ಮೀಸಲಾತಿ ಹೆಸರಿಗಷ್ಟೇ



■ ವಿಜಯಸಾಕ್ಷಿ ಸುದ್ದಿ, ಗದಗ

2014ರಲ್ಲಿ ಸುಪ್ರೀಂಕೋರ್ಟ್ ಲಿಂಗತ್ವ ಅಲ್ಪಸಂಖ್ಯಾತರಿಗೆ ಶೇ. 1ರಷ್ಟು ಮೀಸಲಾತಿಯನ್ನು ಘೋಷಣೆ ಮಾಡಿತ್ತು. ಆದರೆ, ಇದು ಕೇವಲ ಹೆಸರಿಗಷ್ಟೇ ಉಳಿದುಕೊಂಡಿದೆ ಹೊರತು ಇದುವರೆಗೂ ಕಾರ್ಯರೂಪಕ್ಕೆ ಬಂದಿಲ್ಲ. ಇದರಿಂದ ಲಿಂಗತ್ವ ಅಲ್ಪಸಂಖ್ಯಾತರು ಪ್ರತಿದಿನ ಸಮಾಜದಲ್ಲಿ ಅನೇಕ ಕಷ್ಟಗಳನ್ನು ಎದುರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಉಮಾ ಪಿ ಅಸಮಾಧಾನ ವ್ಯಕ್ತಪಡಿಸಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಅವರು ತಮ್ಮ ಅಸಮಾಧಾನ ಹೊರ ಹಾಕಿದರು.

ಕರ್ನಾಟಕ ಸರ್ಕಾರವು ಎಲ್ಲಾ ಇಲಾಖೆಗಳಲ್ಲಿಯೂ ಟ್ರಾನ್ಸ್‌ಜೆಂಡರ್ ವ್ಯಕ್ತಿಗಳಿಗಾಗಿ ಶೇ. 1 ಮೀಸಲಾತಿಯನ್ನು ಅನುಷ್ಠಾನಗೊಳಿಸಬೇಕು. ಹೆಚ್ಚಾಗಿ ನೇಮಕಾತಿ ಮತ್ತು ಆಯ್ಕೆ ಪ್ರಕ್ರಿಯೆಯು ಪಾರದರ್ಶಕತೆಯುಳ್ಳದ್ದು ಮತ್ತು ಒಳಗೊಳ್ಳುವಿಕೆಯನ್ನು ಖಚಿತಪಡಿಸುವಂತೆ ಸ್ಪಷ್ಟ ಮಾರ್ಗಸೂಚಿಗಳನ್ನು ರೂಪಿಸಬೇಕು. ಜೊತೆಗೆ ಕರ್ನಾಟಕದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಲಿಂಗ ಪರಿವರ್ತನೆ ಶಸ್ತ್ರಚಿಕಿತ್ಸೆ ಸೇವೆಗಳನ್ನು ಕಡ್ಡಾಯಗೊಳಿಸಬೇಕು ಎಂದು ಆಗ್ರಹಿಸಿದರು.

ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗಳಿಗೆ ಸುಲಭವಾಗಿ, ಉಚಿತವಾಗಿ ಮತ್ತು ಲಭ್ಯವಿರುವ ಆರೈಕೆಯನ್ನು ಖಚಿತಪಡಿಸಬೇಕು. ಕರ್ನಾಟಕ ಸರ್ಕಾರದ ಆರೋಗ್ಯದ ಮತ್ತು ಮಾನಸಿಕ ಆರೋಗ್ಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂದಿಗಳಿಗೆ ಲಿಂಗತ್ವ ಮತ್ತು ಲೈಂಗಿಕ ಅಲ್ಪಸಂಖ್ಯಾತರು ಎದುರಿಸುತ್ತಿರುವ ಸಮಸ್ಯೆಗಳು, ಸವಾಲುಗಳ ಕುರಿತು ಅರಿವು ಮೂಡಿಸುವಂತಹ ಕೆಲಸವಾಗಬೇಕು

> ಲಿಂಗತ್ವ ಅಲ್ಪಸಂಖ್ಯಾತರು ತಮ್ಮ ಕುಟುಂಬದಿಂದ ದೂರವಿದ್ದು, ಮಾನಸಿಕ ಹಿಂಸೆಯನ್ನು ಅನುಭವಿಸುತ್ತಿದ್ದಾರೆ. ಇದರಿಂದ ಕರ್ನಾಟಕ ಸರ್ಕಾರ ವಸತಿ ಮತ್ತು ಜಾಗಗಳನ್ನು ನೀಡುವ ಯೋಜನೆಗಳ ಅಡಿಯಲ್ಲಿ ವಸತಿ ಮತ್ತು ಖಾಲಿಸ್ಥಳ ಹಂಚಿಕೆ ಮಾಡುವ ಮೂಲಕ ಕ್ರಮ ಕೈಗೊಳ್ಳಬೇಕು ಎಂದು ಉಮಾ ಪಿ ಸರ್ಕಾರಕ್ಕೆ ಮನವಿ ಮಾಡಿದರು.

ಹಾಗೂ ಕಳಂಕ ಮತ್ತು ತಾರತಮ್ಯ ರಹಿತ ಸೇವೆಗಳು ಸಿಗುವಂತಾಗಬೇಕು ಎಂದು ಮನವಿ ಮಾಡಿದರು.

ಸರ್ಕಾರಿ ಇಲಾಖೆಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ವಿಷಯವಾಗಿ ಅರಿವು ಮೂಡಿಸುವುದು ಹಾಗೂ ವೈದ್ಯಕೀಯ ಮತ್ತು ಶಿಕ್ಷಣ ಪಠ್ಯಕ್ರಮಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ವಿಷಯಗಳನ್ನು ಸೇರಿಸಬೇಕು. ಕರ್ನಾಟಕ ರಾಜ್ಯ ಸರ್ಕಾರವು ತಕ್ಷಣವೇ ಲಿಂಗತ್ವ ಅಲ್ಪಸಂಖ್ಯಾತರ ರಾಜ್ಯ ಕಲ್ಯಾಣ ಮಂಡಳಿ ನಿಗಮವನ್ನು ಸ್ಥಾಪಿಸಿ ನಮ್ಮ ಹಿತ ಕಾಪಾಡಬೇಕಿದೆ ಎಂದರು.

ಈ ವೇಳೆ ಆದಿತ್ಯ, ಆರೀಫ್, ಸಿರಾಜ್ ಲಕ್ಕುಂಡಿ ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಮೆಟ್ರಿಕ್ ನಂತರದ ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್ಲೈನ್ ಅರ್ಜಿ ಆಹ್ವಾನಿಸಲು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 15–07–2025 ರಿಂದ ಕೊನೆಯ ದಿನಾಂಕ: 14–08–2025 ರವರೆಗೆ ಇರುತ್ತದೆ.

ಗದಗ ತಾಲೂಕಿನ ಮೆಟ್ರಿಕ್ ನಂತರದ ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಆನ್ಲೈನ್ ಮೂಲಕ ಅರ್ಜಿ ಹಾಕಲು ಸೂಚಿಸಿದೆ.

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ–1, ಎಸ್.ಸಿ & ಎಸ್.ಟಿ ರೂ.2.50ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ರೂ. 1.00 ಲಕ್ಷ. ವಿದ್ಯಾರ್ಥಿಗಳು https://shp.karnataka.gov.in/bcwd ಅನ್ನು ಸಂಪರ್ಕಿಸಿ ಆನ್ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ಸೈಟ್ https://bcwd.karnataka.gov.in/ ನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd-helpline@gmail.com E ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು.

ಸಂಪರ್ಕಿಸಬಹುದಾದ ಸಹಾಯವಾಣಿ ಸಂಖ್ಯೆ: 8050770004 ಮತ್ತು 8050770005 ಸಂಪರ್ಕಿಸಲು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಬಸವರಾಜ್.ವೆಂ.ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಲವಂತದ ಮತಾಂತರ | ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ರಾಜು ಖಾನಪ್ಪನವರ ಆಗ್ರಹ

## ಮತಾಂತರದ ಕುತಂತ್ರಕ್ಕೆ ಬಲಿಯಾಗದಿರಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಮತಾಂತರ ಹಾವಳಿ ಹೆಚ್ಚಾಗುತ್ತಿದೆ. ಮುಸ್ಲಿಂ ಯುವತಿಯನ್ನು ಪ್ರೀತಿಸಿ ಮದುವೆ ಆಗಿದ್ದ ಹಿಂದೂ ಯುವಕನನ್ನು ಬಲವಂತವಾಗಿ ಹೆದರಿಸಿ, ಬೆದರಿಸಿ ನಮಾಜ್ ಮಾಡಿಸಲಾಗುತ್ತಿದೆ. ಜೊತೆಗೆ, ನಮಾಜ್ ಮಾಡುತ್ತಿರುವ ದೃಶ್ಯವನ್ನು ಸೆರೆಹಿಡಿದು ತನ್ನ ಹೆಂಡತಿಗೆ ಕಳುಹಿಬೇಕಾದ ಹಿಂಸೆಯನ್ನು ವಿಶಾಲ್ ಗೋಕಾವಿ ಎನ್ನುವ ಹಿಂದೂ ಯುವಕ ಅನುಭವಿಸಿದ್ದಾನೆ. ಕೂಡಲೇ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಶಿವರಾಮಕೃಷ್ಣ ಸೇವಾ ಸಮಿತಿ ಅಧ್ಯಕ್ಷ ರಾಜು ಖಾನಪ್ಪನವರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡುತ್ತಿದ್ದರು.

ವಿಶಾಲ್ ಗೋಕಾವಿ ದಿನಕ್ಕೆ ಐದು ಹೊತ್ತು ನಮಾಜ್ ಮಾಡಬೇಕು. ಮಾಡದಿದ್ದರೆ ನಿನ್ನ ಮೇಲೆ ಕೇಸ್ ದಾಖಲಿಸುತ್ತೇನೆ ಎಂದು ತಾನು ಕೈಹಿಡಿದ ಹೆಂಡತಿ ಹೆದರಿಸಿ, ಬಲವಂತವಾಗಿ ಮುಳಗುಂದ ನಾಕಾದ ಹತ್ತಿರದ ಮಸೀದಿಗೆ ಕರೆದುಕೊಂಡು ಹೋಗಿ ನಮಾಜ್ ಮಾಡಿಸುತ್ತಾಳೆ. ವಿಶಾಲ್ ನಮಾಜ್ ಮಾಡುವ ದೃಶ್ಯವನ್ನು ಮೊಬೈಲ್‌ನಲ್ಲಿ ಚಿತ್ರೀಕರಿಸಿ ತನ್ನ ಹೆಂಡತಿಯ ವಾಟ್ಸಪ್‌ಗೆ ಕಳುಹಿಸಬೇಕಿತ್ತು. ಈ ಕೆಲಸವನ್ನು ಹುಡುಗಿಯ ಸೋದರ ಮಾವ ಮಾಡುತ್ತಿದ್ದ.

▶▶ 3ನೇ ಪುಟಕ್ಕೆ

> ಕರ್ನಾಟಕದ ಎಲ್ಲ ಮಠಾಧೀಶರು ಲವ್ ಜಿಹಾದ್, ಮತಾಂತರದ ಬಗ್ಗೆ ಧ್ವನಿ ಎತ್ತುತ್ತಿಲ್ಲ. ಮಾತೆತ್ತಿದರೆ ಹಿಂದೂ–ಹಿಂದೂ ಎನ್ನುವ ರಾಜಕಾರಣಿಗಳು ರಾಜಕೀಯ ಲಾಭಕ್ಕಾಗಿ ಧ್ವನಿ ಎತ್ತುತ್ತಿಲ್ಲ. ಇಂತಹ ಕುತಂತ್ರಕ್ಕೆ ಹಿಂದೂ ಯುವಕರು ಯಾವುದೇ ಕಾರಣಕ್ಕೂ ಬಲಿ ಆಗಬಾರದು. ನಿಮ್ಮ ಸಂಪರ್ಕಕ್ಕೆ ಅಂತಹ ವ್ಯಕ್ತಿಗಳು ಕಂಡುಬಂದರೆ ತಕ್ಷಣ ದೂರು ನೀಡಿ.
>
> – ರಾಜು ಖಾನಪ್ಪನವರ. ಶಿವರಾಮಕೃಷ್ಣ ಸೇವಾ ಸಮಿತಿ ಅಧ್ಯಕ್ಷ.

## ಸಂಪಾದಕೀಯ

# ರೋಹಿತ್ ವೇಮುಲ ಮಸೂದೆ: ಶಿಕ್ಷಣದಲ್ಲಿ ಸಮಾನತೆಯತ್ತ ಹೆಜ್ಜೆ

ರೋಹಿತ್ ವೇಮುಲ ಅವರ ಘಟನೆಯು ದೇಶಾದ್ಯಂತ ವಿದ್ಯಾರ್ಥಿ ಸಮುದಾಯದಲ್ಲಿ ಜಾತಿ ತಾರತಮ್ಯದ ಆಳವಾದ ಸಮಸ್ಯೆಯನ್ನು ಹೊರಹಾಕಿತ್ತು. ಈಗ ಕರ್ನಾಟಕ ಸರ್ಕಾರವು ಕರ್ನಾಟಕ ರೋಹಿತ್ ವೇಮುಲ ಶಿಕ್ಷಣ ಮತ್ತು ಘನತೆಯ ಹಕ್ಕು ವಿಧೇಯಕ – 2025 ಅನ್ನು ಮಂಡಿಸಲು ಸಿದ್ಧವಾಗಿರುವುದು ಶ್ಲಾಘನೀಯವಾಗುದೆ.

ಈ ಮಸೂದೆಯ ಮುಖ್ಯ ಉದ್ದೇಶವೆಂದರೆ, ಯಾವುದೇ ವಿದ್ಯಾರ್ಥಿಯು ಜಾತಿ, ವರ್ಗ ಅಥವಾ ಧರ್ಮದ ಆಧಾರದ ಮೇಲೆ ತಾರತಮ್ಯಕ್ಕೆ ಒಳಗಾಗದಂತೆ ರಕ್ಷಣೆ ನೀಡುವುದು. ಈ ಮಸೂದೆಯು ಕೇವಲ ಒಂದು ಸಂಕೇತವಾಗಿರದೆ, ಶಿಕ್ಷಣ ಸಂಸ್ಥೆಗಳಲ್ಲಿ ಸಮಾನತೆ ಮತ್ತು ಘನತೆಯನ್ನು ಖಚಿತಪಡಿಸಿಕೊಳ್ಳಲು ಪ್ರಬಲವಾದ ಕಾನೂನು ಚೌಕಟ್ಟನ್ನು ಒದಗಿಸುವ ಸಾಮರ್ಥ್ಯವನ್ನು ಹೊಂದಿದೆ.

ಕಾಯಿದೆಯ ಉಲ್ಲಂಘನೆಯು ಜಾಮೀನು ರಹಿತ ಅಪರಾಧವೆಂದು ಪರಿಗಣಿಸಲ್ಪಡುವುದು ಮತ್ತು ತಪ್ಪಿತಸ್ಥರಿಗೆ ಜೈಲು ಶಿಕ್ಷೆ ಹಾಗೂ ದಂಡ ವಿಧಿಸುವ ನಿಬಂಧನೆಗಳು ಈ ಮಸೂದೆಯ ಗಂಭೀರತೆಯನ್ನು ಎತ್ತಿ ತೋರಿಸುತ್ತವೆ. ಅಷ್ಟೇ ಅಲ್ಲದೆ, ಸಂಬಂಧಪಟ್ಟ ಸಂಸ್ಥೆಗೆ ಸರ್ಕಾರದ ಆರ್ಥಿಕ ನೆರವು ಮತ್ತು ಅನುದಾನವನ್ನು ನಿಲ್ಲಿಸುವ ಅವಕಾಶವು, ಶಿಕ್ಷಣ ಸಂಸ್ಥೆಗಳು ತಾರತಮ್ಯವನ್ನು ತಡೆಗಟ್ಟುವಲ್ಲಿ ಹೆಚ್ಚು ಜವಾಬ್ದಾರಿಯುತವಾಗಿ ವರ್ತಿಸುವಂತೆ ಪ್ರೇರೇಪಿಸುತ್ತದೆ.

ಈ ಮಸೂದೆಯು ಕೇವಲ ದಂಡನಾತ್ಮಕ ಕ್ರಮಗಳನ್ನು ಮಾತ್ರವಲ್ಲದೆ, ತಾರತಮ್ಯ ಮುಕ್ತ ವಾತಾವರಣವನ್ನು ಸೃಷ್ಟಿಸಲು ಶಿಕ್ಷಣ ಸಂಸ್ಥೆಗಳಲ್ಲಿ ಸಕಾರಾತ್ಮಕ ಬದಲಾವಣೆಗಳನ್ನು ತರಲು ಪ್ರಮುಖ ಪಾತ್ರ ವಹಿಸಬೇಕು. ಇದು ನಿಜಕ್ಕೂ ಕರ್ನಾಟಕದ ಶಿಕ್ಷಣ ಕ್ಷೇತ್ರದಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದ್ದು, ಎಲ್ಲರಿಗೂ ಸಮಾನ ಅವಕಾಶ ಮತ್ತು ಘನತೆಯನ್ನು ಖಾತ್ರಿಪಡಿಸುವ ನಿಟ್ಟಿನಲ್ಲಿ ಹೊಸ ಭರವಸೆಯನ್ನು ಮೂಡಿಸಿದೆ.

### ಶ್ರೀ ಬಸವೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಜರುಗಿದ ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಜಗತ್ತು ದೇವರು ಸೃಷ್ಟಿಸಿದ ಆಟದ ಮೈದಾನ

■ವಿಜಯಸಾಕ್ಷಿ ಸುದ್ದಿ, ಹರಿಹರ

ಮನುಷ್ಯ ಜೀವನ ಬಹು ಜನ್ಮದ ಪುಣ್ಯದ ಫಲ. ಅರಿವುಳ್ಳ ಜನ್ಮದಲ್ಲಿ ಬಂದ ಮನುಷ್ಯ ಆದರ್ಶಗಳನ್ನು ಇಟ್ಟುಕೊಂಡು ಬಾಳಬೇಕು. ಹೆತ್ತ ತಾಯಿ, ಬೆಳೆಸಿದ ತಂದೆ ದೇವರಿಗೆ ಸಮಾನ. ಹೆತ್ತ ಮಡಿಲು, ಹೊತ್ತ ಹೆಗಲನ್ನು ಎಂದಿಗೂ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರ ಹಳೇಪೇಟೆ ಶ್ರೀ ಬಸವೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜಗತ್ತು ದೇವರು ಸೃಷ್ಟಿಸಿದ ಆಟದ ಮೈದಾನ. ನಾವಿಲ್ಲಿ ಆಟಗಾರರಷ್ಟೇ. ನಿಯಮದಿಂದ ಆಟ ಆಡಿದರೆ ಗೆಲುವು ನಿಶ್ಚಿತ. ನಿಯಮ ಮೀರಿ ಆಟ ಆಡಿದರೆ ಸೋಲು ಖಚಿತ. ಆಶೆ ಕಳೆದುಕೊಂಡು ಬದುಕಬಹುದು. ಆದರೆ ಆಸಕ್ತಿ ಕಳೆದುಕೊಂಡು ಬಾಳಲಾಗದು. ಗೊಂಬೆ ಆಡಿಸುವ ಭಗವಂತ ಒಬ್ಬ ಮೇಲೆ ಇದ್ದಾನೆ. ನಮ್ಮ ಸುತ್ತ ನೂರೆಂಟು ಜನ ಕಡ್ಡಿ ಆಡಿಸುವವರು ಇರುತ್ತಾರೆ. ಗೌರವ ಎನ್ನುವುದು ಹಣ, ಆಸ್ತಿ, ಅಂತಸ್ತು ನೋಡಿ ಕೊಡುವುದಲ್ಲ. ನಮ್ಮ ಹತ್ತಿರ ಏನಿಲ್ಲದಿದ್ದರೂ ನಮ್ಮ ಮಾತಿಗೆ, ಗುಣಕ್ಕೆ, ಪ್ರೀತಿಗೆ ಕೊಡುವುದೇ ನಿಜವಾದ ಗೌರವ. ಆಚರಣೆ, ಅನುಸಂಧಾನ ಇಲ್ಲದ ಬರಿ ಮಾತಿಗೆ ಯಾವುದೇ ಬೆಲೆ ಸಿಗಲಾರದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಎಚ್ಚರಿಸಿದ್ದಾರೆ. ಹರಿಹರ ನಗರದಲ್ಲಿ ನಡೆಯುವ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆಯಿಂದ ಭಕ್ತರು ಸಂಸ್ಕಾರವಂತರನ್ನಾಗಿ ಪರಿವರ್ತಿಸುವುದೇ ಮೂಲ ಉದ್ದೇಶವಾಗಿದೆ ಎಂದರು.



ಸಮಾರಂಭ ಉದ್ಘಾಟಿಸಿದ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಗೌರವಾಧ್ಯಕ್ಷರಾದ ಯಡಿಯೂರು ಕ್ಷೇತ್ರದ ಬಾಳೆಹೊನ್ನೂರು ಖಾಸಾ ಶಾಖಾ ಮಠದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನೆಯಲ್ಲಿ ಹಿರಿಯರ ಕೈಯಲ್ಲಿ ನಿರ್ಧಾರ ಇರುವವರೆಗೆ ಮನೆ ಒಡೆಯುವುದಿಲ್ಲ. ಮನೆಯಲ್ಲಿ ಎಲ್ಲರೂ ಹಿರಿಯರಾಗಲು ಪ್ರಾರಂಭಿಸಿದಾಗ ಮನೆ ಒಡೆಯಲು ಹೆಚ್ಚು ಸಮಯ ತೆಗೆದುಕೊಳ್ಳುವುದಿಲ್ಲ. ಧರ್ಮ ಎಲ್ಲರನ್ನು ಒಗ್ಗೂಡಿಸುವ ಕೆಲಸ ಮಾಡಿದರೆ ಜಾತಿ ಒಡೆಯುವ ಕೆಲಸ ಮಾಡುತ್ತದೆ. ಜಾತಿಗಿಂತ ನೀತಿ–ನಿಯತ್ತು ಮುಖ್ಯ. ಶ್ರೀ ರಂಭಾಪುರಿ ಜಗದ್ಗುರುಗಳವರ ಆಷಾಢ ಮಾಸದ ಜ್ಞಾನಯಜ್ಞ ನಮ್ಮೆಲ್ಲರನ್ನು ಸನ್ಮಾರ್ಗದೆಡೆಗೆ ಕರೆದೊಯ್ಯುವುದೆಂದರು.

ಮಲ್ಲಿಕಾರ್ಜುನ ದೇವಾಂಗ ಮಾತನಾಡಿ, ಸುಖ ಯಾವಾಗಲೂ ಸಾಸಿವೆಯಷ್ಟೇ ಸಿಗುವುದು. ಕಷ್ಟ ಯಾವಾಗಲೂ ಸಾಗರದಷ್ಟು ಇರುತ್ತದೆ. ಜೀವನವು ಸಹ ಹಾಗೆ. ಕತ್ತಲು ದೊಡ್ಡದು. ಅದನ್ನು ಓಡಿಸುವ ದೀಪ ಚಿಕ್ಕದು ಎಂಬುದನ್ನ ಮರೆಯಬಾರದೆಂದರು.

ಮುಖ್ಯ ಅತಿಥಿಗಳಾಗಿ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರ ಕಾರ್ಯಾಧ್ಯಕ್ಷ ಜುಂಜಪ್ಪ ಹೆಗ್ಗಪ್ಪನವರ, ಸಿರಿಗೆರೆಯ ನಾಗನಗೌಡರು, ಹರಿಹರದ ಹಾಲೇಶಗೌಡ ಬಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಪಡೆದರು. ಹರಿಹರ ವೀರಶೈವ ಸಮಾಜದ ಅಧ್ಯಕ್ಷ ಡಿ.ಜಿ. ಶಿವಾನಂದಪ್ಪ, ಸಿ.ವಿ. ಪಾಟೀಲ, ಹೆಚ್.ವಿ. ಭಿಕ್ಷಾವರ್ತಿಮಠ, ಟಿ.ಜಿ. ಮುರುಗೇಶಪ್ಪ, ಎಸ್.ಎಚ್. ಪಾಟೀಲ ಹಾಗೂ ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ನೇತೃತ್ವ ವಹಿಸಿದ ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸಮಾಧಾನಕ್ಕೆ ನಮಗಿಂತ ಕೆಳಗಿನವರನ್ನು ನೋಡಬೇಕು. ಸಾಧನೆಗೆ ನಮಗಿಂತ ದೊಡ್ಡವರನ್ನು ನೋಡಬೇಕೆಂದು ಸ್ವಾಮಿ ವಿವೇಕಾನಂದರು ಹೇಳಿದ ಮಾತು ಸತ್ಯವಾದುದು. ಆದರ್ಶ ಮೌಲ್ಯಗಳನ್ನು ಪರಿಪಾಲಿಸಿಕೊಂಡು ಜೀವನ ಸಾರ್ಥಕಪಡಿಸಿಕೊಳ್ಳಬೇಕೆಂದರು.

ವರ್ಷಿಣಿ ಭರತ ನಾಟ್ಯ ಮಾಡಿದರು. ಕಾಂತರಾಜ ಮತ್ತು ವೀರೇಶ ಭಕ್ತಿಗೀತೆ ಹಾಡಿದರು. ಉಪನ್ಯಾಸಕ ವಜ್ರೇಶ್ ಸ್ವಾಗತಿಸಿದರು. ಡಾ. ಎ.ಎಮ್. ರಾಜಶೇಖರ ಮತ್ತು ರತ್ನ ಸಾಲಿಮಠ ನಿರೂಪಿಸಿದರು. ಡಾ. ಸವಿತಾ ಮಹೇಶ್ ಪ್ರಸಾದ ಸೇವೆ ಸಲ್ಲಿಸಿದರು.

### ಆಮಂತ್ರಣ ಪತ್ರಿಕೆ ಬಿಡುಗಡೆ

ಜುಲೈ 21, 22ರಂದು ದಾವಣಗೆರೆಯಲ್ಲಿ ನಡೆಯಲಿರುವ ವೀರಶೈವ ಪೀಠಾಚಾರ್ಯರ ಹಾಗೂ ಶಿವಾಚಾರ್ಯರ ಶೃಂಗ ಸಮ್ಮೇಳನದ ಆಮಂತ್ರಣ ಪತ್ರಿಕೆಯನ್ನು ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆ ಮಾಡಿದರು.

# ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ, ಅರಿವು ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಗದಗ ಜಿಲ್ಲೆಗೆ ಸಂಬಂಧಿಸಿದಂತೆ, ಕಾರ್ಮಿಕ ಆಯುಕ್ತಾಲಯ ಹಾಗೂ ಕರ್ನಾಟಕ ಅಸಂಘಟಿತ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ, ಗಿಗ್ ಕಾರ್ಮಿಕರ ವಿಮಾ ಯೋಜನೆ, ಪತ್ರಿಕಾ ವಿತರಕರ ವಿಮಾ ಯೋಜನೆ, ಮೋಟಾರ ಸಾರಿಗೆ ಹಾಗೂ ಸಂಬಂದಿಸಿದ ನೌಕರರ ಅಪಘಾತ ಪರಿಹಾರ ಯೋಜನೆಯಲ್ಲಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ,

ಜುಲೈ 18 ರಂದು ಬೆಳಿಗ್ಗೆ 11 ಗಂಟೆಗೆ ಗದಗ ನಗರದ ಶ್ರೀ ವಿವೇಕಾನಂದ ಸಭಾಭವನ, ಎ,ಪಿ,ಎಮ್,ಸಿ ಯಾರ್ಡ್ ಗದಗ ನಗರದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರ್ನಾಟಕ ಒನ್ ಸೇವಾ ಕೇಂದ್ರ ಉದ್ಘಾಟನೆ ನೆರವೇರಿಸಿದ ಆನಂದ ಗಡ್ಡದೇವರಮಠ

# ಒಂದೇ ಸೂರಿನಡಿ ಹಲವು ಸೇವೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಾಗರಿಕರಿಗೆ ಆನ್‌ಲೈನ್ ಸೇವೆಗಳು ಒಂದೇ ಸೂರಿನಲ್ಲಿ ದೊರೆಯಬೇಕೆನ್ನುವ ಉದ್ದೇಶದಿಂದ ರಾಜ್ಯ ಸರಕಾರವು ಕರ್ನಾಟಕ ಒನ್ ಸೇವಾ ಕೇಂದ್ರವನ್ನು ಸ್ಥಾಪಿಸಿದೆ. ಈ ಕೇಂದ್ರವು ನಾಗರಿಕರಿಗೆ ವಿವಿಧ ಸರ್ಕಾರಿ ಮತ್ತು ಖಾಸಗಿ ಸೇವೆಗಳನ್ನು ಒಂದೇ ಸ್ಥಳದಲ್ಲಿ ಒದಗಿಸುತ್ತದೆ. ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಯುವ ಮುಖಂಡ ಆನಂದ ಗಡ್ಡದೇವರಮಠ ಅಭಿಪ್ರಾಯಪಟ್ಟರು.

ಅವರು ರವಿವಾರ ಪಟ್ಟಣದ ಬಳಿಗಾರ(ಕಾಶೆಟ್ಟಿ) ಓಣಿಯಲ್ಲಿ ನೂತನ ಕರ್ನಾಟಕ ಒನ್ ಸೇವಾ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದರು.



ಕರ್ನಾಟಕ ಒನ್ ಕರ್ನಾಟಕ ಸರ್ಕಾರದ ಆನ್‌ಲೈನ್ ಪೋರ್ಟಲ್ ಆಗಿದ್ದು, ಇದರಲ್ಲಿ ಸರಕಾರದ ಅನೇಕ ಮಹತ್ವದ ಯೋಜನೆಗಳು, ಆಧಾರ್ ತಿದ್ದುಪಡಿ ಇತ್ಯಾದಿ ಸುಮಾರು 48 ಸೇವೆಗಳು ಇದರಲ್ಲಿ ದೊರೆಯುವಂತೆ ರೂಪಿಸಲಾಗಿದೆ. ಮುಂದಿನ ದಿನಗಳಲ್ಲಿ ಆಸ್ತಿ ತೆರಿಗೆಗಳನ್ನು ಸಹ ಇದೇ ಕರ್ನಾಟಕ ಒನ್ ಕೇಂದ್ರದಲ್ಲಿ ಪಾವತಿಸಬಹುದಾಗಿದ್ದು, ಹಂತಹಂತವಾಗಿ ಈ ಕೇಂದ್ರದಿಂದ ಸಾರ್ವಜನಿಕರಿಗೆ ಹೆಚ್ಚಿನ ಸೇವೆ ದೊರೆಯುವಂತಾಗಲಿ ಎಂದು ಹೇಳಿದರು.

ಕೇಂದ್ರದ ಮುಖ್ಯಸ್ಥ ಶಬ್ಬೀರ್‌ಅಲಿ ಶೇಖ್ ಮಾತನಾಡಿ, ಕರ್ನಾಟಕ ಸರ್ಕಾರವು ಒದಗಿಸುವ ವಿವಿಧ ಸೇವೆಗಳನ್ನು ಪಡೆಯಲು ಜನರು ಕರ್ನಾಟಕ ಒನ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬಹುದು. ಆಸ್ತಿ ತೆರಿಗೆ, ನೀರಿನ ಬಿಲ್‌ಗಳನ್ನೂ ಇಲ್ಲಿ ಪಾವತಿಸಬಹುದು. ಕೇಂದ್ರ ಹಾಗೂ ರಾಜ್ಯ ಸರಕಾರದ ವಿವಿಧ ಸೇವೆಗಳನ್ನು ಇಲ್ಲಿ ಪಡೆಯಬಹುದು. ಕರ್ನಾಟಕ ಒನ್ ಕೇಂದ್ರ ಪಟ್ಟಣದ ನಾಗರಿಕರಿಗೆ ವಿವಿಧ 15 ಇಲಾಖೆಗಳ 48 ಸೇವೆಗಳನ್ನು ಒದಗಿಸಲಿದ್ದು, ಹಂತ ಹಂತವಾಗಿ ಸೇವಾ ಕ್ಷೇತ್ರವನ್ನು ವಿಸ್ತರಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ಪೀರದೋಷ್ ಅಡೂರ, ಸದಸ್ಯರಾದ ಎಸ್.ಕೆ. ಹವಾಲ್ದಾರ, ಮುಸ್ತಾಕ್‌ಅಹ್ಮದ್ ಶಿರಹಟ್ಟಿ, ಸಿಕಂದರ್ ಕಣಕೆ, ಅಂಜುಮನ್ ಸಂಸ್ಥೆ ಅಧ್ಯಕ್ಷ ಎಮ್.ಎಮ್. ಗದಗ, ಇಬ್ರಾಹಿಂ ಮುಲ್ಲಾ, ಗಂಗಾಧರ ಮ್ಯಾಗೇರಿ, ನಾರಾಯಣಸಾ ಪವಾರ, ಕಿರಣ ನವಲೆ, ನಿರಂಜನ ವಾಲಿ, ಚಂದ್ರಶೇಖರ ಸುಂಕದ, ನೀಲಪ್ಪ ಪಡಗೇರಿ, ವಾಸಿ ಬೋಮಲೆ ಮುಂತಾದವರಿದ್ದರು.

# ಸಮಾಜ ಸಂಘಟನೆಗೆ ಒತ್ತು ನೀಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಎಲ್ಲರಿಗೂ ವಿದ್ಯೆ ಮುಖ್ಯ. ವಿದ್ಯೆ ಇಲ್ಲದಿದ್ದರೆ ಜೀವನವೇ ಶೂನ್ಯ. ಕಾರಣ ಹಾಲುಮತ ಸಮಾಜ ಬಾಂಧವರು ಮಕ್ಕಳಿಗೆ ಶಿಕ್ಷಣ ದೊರಕಿಸಲು ಆದ್ಯತೆ ನೀಡಬೇಕು. ಹಾಲುಮತ ಸಮಾಜದಲ್ಲಿ ಸಾಕಷ್ಟು ವಿದ್ಯಾವಂತರಿದ್ದು, ಸಮಾಜಮುಖಿ ಕಾರ್ಯಕ್ರಮಗಳಲ್ಲಿ ಯುವಕರು ಹಿರಿಯರ ಮಾರ್ಗದರ್ಶನದಲ್ಲಿ ಪಾಲ್ಗೊಂಡು ಸಮಾಜ ಸಂಘಟನೆಗೆ ಒತ್ತು ನೀಡಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.



ಪಟ್ಟಣದ ಚನ್ನಮ್ಮನ ವನದಲ್ಲಿ ಲಕ್ಷ್ಮೇಶ್ವರ ತಾಲೂಕು ಕನಕ ನೌಕರರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ತಾಲೂಕು ಹಾಲುಮತ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರು ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಧಾರವಾಡದ ಡಾ. ಬಸವರಾಜ ದೇವರು ಮಹಾಸ್ವಾಮಿಗಳು ಮತ್ತು ಹುಲ್ಲೂರು ಅಮೋಘಿಮಠದ ಸಿದ್ದಯ್ಯ ಅಮೋಘಿಮಠ ಸ್ವಾಮಿಗಳ ಸಾನ್ನಿಧ್ಯದಲ್ಲಿ ಉದ್ಘಾಟಿಸಿ ಅವರು ಮಾತನಾಡಿದರು.

ತಾಲೂಕಾ ಕನಕ ನೌಕರರ ಪತ್ತಿನ ಸಹಕಾರಿ ಸಂಘವನ್ನು ಉದ್ಘಾಟಿಸಿದ ಶಾಂತಪ್ಪ ಮಾತನಾಡಿ, ಅನುತ್ತೀರ್ಣರಾದ ತಕ್ಷಣ ಇಡೀ ಜೀವನವೇ ಮುಗಿಯುವುದಿಲ್ಲ. ಮತ್ತೆ ಪರೀಕ್ಷೆ ಬರೆದು ಪಾಸಾಗಿ ಬದುಕಿನಲ್ಲಿ ಸಾಧನೆ ಮಾಡುವುದೇ ಮುಖ್ಯ. ಸೋಲುಗಳನ್ನೇ ಗೆಲುವಿನ ಮೆಟ್ಟಿಲುಗಳನ್ನಾಗಿ ಮಾಡಿಕೊಳ್ಳಬೇಕು ಎಂದು ಹೇಳಿದರು.

ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, 1ರಿಂದ 4ನೇ ತರಗತಿವರೆಗೆ ಕನ್ನಡದಲ್ಲಿ ಮಕ್ಕಳಿಗೆ ಕಡ್ಡಾಯ ಶಿಕ್ಷಣ ನೀಡಬೇಕು. ನಂತರ ಇಂಗ್ಲೀಷ್ ಭಾಷೆಯ ಶಿಕ್ಷಣ ಕೊಡಿಸಬೇಕು. ಪಾಲಕರು ಮಕ್ಕಳಿಗೆ ಮೊಬೈಲ್ ಕೊಡಬಾರದು ಮತ್ತು ಒತ್ತಡ ಹಾಕಬಾರದು. ಪರೀಕ್ಷೆಯಲ್ಲಿ ನಪಾಸಾದ ಕೂಡಲೇ ಆತ್ಮಹತ್ಯೆ ಮಾಡಿಕೊಳ್ಳುವುದು ಹೇಡಿಗಳ ಲಕ್ಷಣ. ಸಮಸ್ಯೆಗಳನ್ನು ಎದುರಿಸಿ ಜೀವನ ರೂಪಿಸಿಕೊಳ್ಳುವದೇ ಸಾಧನೆ ಎಂದು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಧಾರವಾಡ ರೇವಣ ಸಿದ್ಧೇಶ್ವರಮಠದ ಬಸವರಾಜ ದೇವರು ಮಾತನಾಡಿ, ಹಾಲುಮತ ಸಮಾಜದವರು ಶ್ರಮ ವಹಿಸಿ ಕೆಲಸ ಮಾಡುವವರು. ಅವರಿಂದ ಇನ್ನೂ ಜಾನಪದ ಸಾಹಿತ್ಯ ಉಳಿದುಕೊಂಡಿದೆ. ಸಮಾಜ ಬಾಂಧವರು ತಮ್ಮ ಮಕ್ಕಳಿಗೆ ತಪ್ಪದೆ ಶಿಕ್ಷಣ ಕೊಡಿಸಬೇಕು. ಎಲ್ಲರಲ್ಲೂ ಪ್ರತಿಭೆ ಇರುತ್ತದೆ. ಅದನ್ನು ಗುರುತಿಸಿ ಪ್ರೋತ್ಸಾಹ ನೀಡಬೇಕಾದ್ದು ಸಮಾಜದ ಕರ್ತವ್ಯ ಎಂದರು.

ಸಂಘದ ಅಧ್ಯಕ್ಷ ಮಂಜುನಾಥ ಕೊಕ್ಕರಗುಂದಿ ಅಧ್ಯಕ್ಷತೆ ವಹಿಸಿದ್ದರು. ಸಿದ್ದಯ್ಯ ಅಮೋಘಿಮಠ, ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಎಚ್.ಕೆ. ಭಾರ್ಗವ ಮಾತನಾಡಿದರು. ಈ ಸಂದರ್ಭದಲ್ಲಿ ವಿ.ಜಿ. ಪಡಿಗೇರಿ, ಫಕ್ಕೀರಪ್ಪ ಹೆಬಸೂರ, ನಿಂಗಪ್ಪ ಬನ್ನಿ, ವೀರೇಂದ್ರಗೌಡ ಪಾಟೀಲ, ಭಾರ್ಗವ್, ಜಿ.ಆರ್. ಕೊಪ್ಪದ, ಹನಮಂತಪ್ಪ ಹುಳಕನವರ, ಬಸಣ್ಣ ಹೊಳಲಾಪುರ, ಯಲ್ಲಪ್ಪ ಸೂರಣಗಿ, ಅಣ್ಣಪ್ಪ ರಾಮಗೇರಿ, ಮಂಜುನಾಥ ಕೊಪ್ಪದ, ಯಲ್ಲವ್ವ ದುರ್ಗಣ್ಣವರ, ಶೇಕಪ್ಪ ಕಾಳೆ, ಮುದಕಪ್ಪ ಗದ್ದಿ, ಸೋಮಣ್ಣ ಬೆಟಗೇರಿ, ಅಡಿವೆಕ್ಕ ಬೆಟಗೇರಿ, ನಿಂಗಪ್ಪ ಬಂಕಾಪುರ, ಛಾಯಪ್ಪ ಬಸಾಪೂರ, ಅಣ್ಣಪ್ಪ ರಾಮಗೇರಿ ಮುಂತಾದವರಿದ್ದರು. ಬಸವರಾಜ ಯರಗುಪ್ಪಿ, ನಾಗರಾಜ ಶಿಗ್ಲಿ ನಿರೂಪಿಸಿದರು.

# ರೈತರಿಗೆ ಅನ್ಯಾಯ: ತಹಸೀಲ್ದಾರರಿಗೆ ಮನವಿ




■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಎಪಿಎಂಸಿಯಲ್ಲಿ ದಲ್ಲಾಳಿಗಳು ರೈತರ ಬೆಳೆಗಳಿಗೆ ಸರಿಯದ ಬೆಲೆ ನೀಡದೆ, ಹಮಾಲರ ಮೂಲಕ ತೂಕದಲ್ಲಿ ವ್ಯತ್ಯಾಸ ಮಾಡಿ ರೈತನಿಗೆ ಅನ್ಯಾಯವೆಸುಗುತ್ತಿರುವುದು ಖಂಡನೀಯವೆಂದು ರಾಜ್ಯ ರೈತ ಸಂಘ ಹಸಿರುಸೇನೆ ವಾಸುದೇವ ಮೇಟಿ ಬಣದ ಜಿಲ್ಲಾಧ್ಯಕ್ಷ ಸಿ.ಎ. ಗಾಳೆಪ್ಪ ಆರೋಪಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಸಿರುಸೇನೆ ಹಾಗೂ ವಾಸುದೇವ ಮೇಟಿ ಬಣದ ವತಿಯಿಂದ ಸೋಮವಾರ ರೈತರ ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ತಾಲೂಕು ಆಡಳಿತ ಕಚೇರಿಗೆ ತೆರಳಿ ತಹಸೀಲ್ದಾರರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಹಲವು ದಶಕಗಳಿಂದ ಸಾಗುವಳಿ ಮಾಡಿಕೊಂಡು ಬಂದಿರುವ ರೈತರಿಗೆ ಪಟ್ಟಾ ಹಾಗೂ ಹಕ್ಕುಪತ್ರ ನೀಡಬೇಕು. ರೈತರ ಕೃಷಿ ಚಟುವಟಿಕೆಗಳಿಗೆ ಕೆಇಬಿ ವತಿಯಿಂದ ನಿರಂತರವಾಗಿ ವಿದ್ಯುತ್‌ನಲ್ಲಿ ವ್ಯತ್ಯಯವಾಗುತ್ತಿದ್ದು, ಅದನ್ನು ಸಂಬಂಧಿಸಿದ ಅಧಿಕಾರಿಗಳು ಸರಿಪಡಿಸಬೇಕು, ಅಕ್ರಮ–ಸಕ್ರಮದಲ್ಲಿ ಅರ್ಜಿ ಸಲ್ಲಿಸಿದ ರೈತರಿಗೆ ಶೀಘ್ರದಲ್ಲೇ ಭೂಮಿ ನೀಡಬೇಕು ಎಂದು ಒತ್ತಾಯಿಸಿದರು.

ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ರತ್ನಮ್ಮ, ಉಪಾಧ್ಯಕ್ಷೆ ರೂಪ, ಪ್ರಧಾನ ಕಾರ್ಯದರ್ಶಿ ಲಕ್ಷ್ಮೀ, ಸದಸ್ಯರುಗಳಾದ ನಿಂಗಮ್ಮ, ಹೇಮಂತ್ ಕುಮಾರ್, ಹನುಮಂತ, ನಾಗರತ್ನ, ನಾಗಮ್ಮ, ತೊಗರಿಕಟ್ಟಿ ರಾಜಪ್ಪ, ಶಶಿಕಲ, ಜ್ಯೋತಿ, ಶಶಿಧರ ಸೇರಿದಂತೆ ಇತರರು ಭಾಗವಹಿಸಿದ್ದರು.

### ಕೀಟನಾಶಕದ ಬದಲಾಗಿ ತಾನೇ ಬೆಳೆದ ಸಮೃದ್ಧ ಬೆಳೆಗೆ ಕಳೆನಾಶಕ ಸಿಂಪಡಿಸಿದ ಮುಗ್ಧ ರೈತ

# 3 ಎಕರೆ ಹತ್ತಿ ಬೆಳೆ ನಾಶ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಗೊಜನೂರ ಗ್ರಾಮದ ಮುಗ್ಧ ರೈತನೋರ್ವ ತಾನೇ ಕಷ್ಟಪಟ್ಟು ಬಿತ್ತಿ, ಬೆಳೆದು ಸಂರಕ್ಷಿಸಿದ ಹತ್ತಿ ಬೆಳೆಗೆ ತನ್ನ ಕೈಯಾರ ಕಳೆನಾಶಕ ಸಿಂಪಡಿಸಿ ಬೆಳೆ ಹಾಳು ಮಾಡಿಕೊಂಡ ಘಟನೆ ಜರುಗಿದೆ. ಶಿಕ್ಷಣದ ಕೊರತೆ, ತಪ್ಪು ಮಾಹಿತಿ, ತಪ್ಪು ಕಲ್ಪನೆಯಿಂದ ಕೀಟನಾಶಕದ ಬದಲಾಗಿ ತಾನೇ ಬೆಳೆದ ಸಮೃದ್ಧ ಬೆಳೆಗೆ ಕಳೆನಾಶಕ ಸಿಂಪಡಿಸಿ ಈಗ ಮರುಗುತ್ತಿದ್ದಾನೆ.



ಗೊಜನೂರ ಗ್ರಾಮದ ಹಿರಿಯ ರೈತ ತಾಜುದ್ದೀನ ಆನಿ ಎಂಬ ರೈತ ತನ್ನ 6 ಎಕರೆ ಜಮೀನಿನಲ್ಲಿ 3 ಎಕರೆ ಗೋವಿನಜೋಳ, 3 ಎಕರೆ ಹತ್ತಿ ಬಿತ್ತನೆ ಮಾಡಿದ್ದರು. ಇತ್ತೀಚಿನ ದಿನಗಳಲ್ಲಿ ಕೃಷಿ ಕೂಲಿಕಾರರ ಕೊರತೆಯಿಂದ ರೈತರು ಕಳೆನಾಶಕಕ್ಕೆ ಮೊರೆ ಹೋಗಿದ್ದಾರೆ. ಅದರಂತೆ ಇವರೂ ಸಹಿತ ಗೋವಿನ ಜೋಳದಲ್ಲಿನ ಕಳೆ ನಿಯಂತ್ರಣಕ್ಕಾಗಿ ಲಕ್ಷ್ಮೇಶ್ವರದ ಕೃಷಿ ಪರಿಕರ ಮಾರಾಟದ ಅಂಗಡಿಯಿಂದ ಕಳೆ ನಾಶಕ ಕೇಳಿ ತಂದಿದ್ದಾರೆ. ಗೋವಿನ ಜೋಳದ ಬೆಳೆಯಲ್ಲಿ ಸಿಂಪರಣೆ ಮಾಡಿ ಉಳಿದ ಕಳೆನಾಶಕವನ್ನೇ 3 ಎಕರೆ ಹತ್ತಿ ಬೆಳೆಗೆ ಸಿಂಪರಣೆ ಮಾಡಿದ್ದಾರೆ.

ಸಿಂಪರಣೆಯ ನಾಲ್ಕು ದಿನದ ನಂತರ ಬೆಳೆ ಒಣಗಿರುವುದು ಗೊತ್ತಾಗಿದೆ. ಆದರೆ ಇದಕ್ಕೆ ಯಾರನ್ನೂ ದೂಷಿಸಲಾಗದೇ ಒಳಗೊಳಗೆ ಸಂಕಟ ಪಟ್ಟುಕೊಳ್ಳುವ ಪರಿಸ್ಥಿತಿ ರೈತನದ್ದಾಗಿದೆ. ಇಷ್ಟೇ ಅಲ್ಲದೆ, ಕಳೆನಾಶಕ ಸಿಂಪರಣೆಯಿಂದ ಪಕ್ಕದ ಹೊಲದ ಒಂದಷ್ಟು ಹೆಸರು ಬೆಳೆ ಹಾಳಾಗಿ ಅದಕ್ಕೂ ದಂಡ ತೆತ್ತಿದ್ದಾನೆ. ಸ್ಥಳಕ್ಕೆ ಭೇಟಿ ನೀಡಿ ಬೆಳೆ ವೀಕ್ಷಣೆ ಮಾಡಿದ ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಕೃಷಿ ಕೂಲಿಕಾರರ ಕೊರತೆಯ ಕಾರಣದಿಂದ ರೈತರು ಅತಿಯಾದ ಕಳೆನಾಶಕದ ಬಳಕೆ ಮಾಡುತ್ತಿರುವುದು ಭವಿಷ್ಯದ ದೃಷ್ಟಿಯಿಂದ ಅಪಾಯಕಾರಿಯಾಗಿದೆ. ಬೆಳೆ ರಕ್ಷಣೆಯ ಅನಿವಾರ್ಯತೆಯ ನಡುವೆ ಕಳೆನಾಶಕ ಸಿಂಪರಣೆ ಮಾಡುವ ಮೊದಲು ಕೃಷಿ ಅಧಿಕಾರಿಗಳು, ನುರಿತ/ಅಧಿಕೃತ ಕೃಷಿ ಪರಿಕರ ಮಾರಾಟಗಾರರು, ವಿದ್ಯಾವಂತ ಪ್ರಗತಿಪರ ರೈತರ ಸಲಹೆ–ಸೂಚನೆ ಪಡೆಯಬೇಕು.

ಕಳೆ ನಾಶಕದಿಂದ ಬೆಳೆಹಾನಿಯಾದರೆ ಯಾವುದೇ ಪರಿಹಾರ/ಸಹಾಯಧನ ಸಿಗಲಾರದು. ಕಳೆ ನಾಶದ ಜತೆಗೆ ಭೂಮಿಯಲ್ಲಿನ ಬೆಳೆ ಪೋಷಕ ಸೂಕ್ಷ್ಮಾಣು ಜೀವಿಗಳನ್ನು ನಾಶ ಮಾಡುತ್ತದೆ. ಅತಿಯಾದ ಕಳೆನಾಶಕದಿಂದ ಅಳಿಲು, ಹಾವು, ಮೊಲ, ಬೆಕ್ಕು, ಪಕ್ಷಿ ಸಂಕುಲಕ್ಕೆ ಕಂಟಕವಾಗುತ್ತಿದೆ. ಕೃಷಿಯೂ ಒಂದು ವಿಜ್ಞಾನವೇ ಆಗಿದೆ. ಅರಿತು ಬಳಕೆ ಮಾಡಬೇಕು ಎಂದರು.

ಬದಲಾವಣೆಗೆ ತಕ್ಕಂತೆ ಹೊಂದಿಕೊಳ್ಳಲಾಗದ ಅವಿದ್ಯಾವಂತ, ಮುಗ್ಧ ರೈತರರಿಗೆ ಕೃಷಿ ಇಲಾಖೆ ತಿಳುವಳಿಕೆ, ಜಾಗೃತಿ ಮೂಡಿಸುವ ಕಾರ್ಯಕ್ರಮಗಳಾಗಬೇಕು. ಭವಿಷ್ಯದ ದೃಷ್ಟಿಯಿಂದ ಕ್ರಿಮಿನಾಶಕ, ಕಳೆನಾಶಕದ ಬದಲಾಗಿ ಜೈವಿಕ ಸಂಶೋಧನೆ, ಮಾರ್ಗೋಪಾಯ ಕಂಡುಕೊಳ್ಳಬೇಕಾಗಿದೆ. ಸಾವಯುವ ಕೃಷಿಗೆ ಸರ್ಕಾರ ಪ್ರೋತ್ಸಾಹ ನೀಡುವುದು ಅಗತ್ಯವಾಗಿದೆ ಎಂದು ರೈತ ಚನ್ನಪ್ಪ ಷಣ್ಮುಕಿ ಮನವಿ ಮಾಡಿಕೊಂಡಿದ್ದಾರೆ.

## ಜು.19ಕ್ಕೆ ಪತ್ರಿಕಾ ದಿನಾಚರಣೆ, ರಕ್ತದಾನ ಶಿಬಿರ

▶▶ ಮೊದಲನೇ ಪುಟದಿಂದ

ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾಹಿತಿ ನೀಡಿ, ಇತ್ತೀಚಿನ ದಿನಗಳಲ್ಲಿ ರಕ್ತದಾನದ ಅವಶ್ಯಕತೆ ಸಾಕಷ್ಟಿದ್ದು, ಈ ನಿಟ್ಟಿನಲ್ಲಿ ಪತ್ರಿಕಾ ದಿನಾಚರಣೆಯ ಅಂಗವಾಗಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ. ವಿವಿಧ ಕನ್ನಡಪರ ಸಂಘಟನೆಗಳು, ಯುವಕರು, ಶಿಕ್ಷಕರು, ನೌಕರ ವರ್ಗದವರು ಸೇರಿ ಸಾರ್ವಜನಿಕರು ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡುವ ಮೂಲಕ ಆರೋಗ್ಯಕರ ಸಮಾಜಕ್ಕೆ ಅಳಿಲು ಸೇವೆ ಮಾಡೋಣ ಎಂದರು.

ಕಾರ್ಯಕ್ರಮವನ್ನು ಶಾಸಕ ಡಾ. ಚಂದ್ರು ಲಮಾಣಿ ಉದ್ಘಾಟಿಸುವರು. ತಾಲೂಕಾ ವೈದ್ಯಾಧಿಕಾರಿ ಡಾ. ಸುಭಾಷ್ ದಾಯಗೊಂಡ, ಲಕ್ಷ್ಮೇಶ್ವರ ತಾಲೂಕು ವೈದ್ಯರ ಸಂಘದ ಅಧ್ಯಕ್ಷ ಡಾ. ಪಿ.ಡಿ. ತೋಟದ, ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ, ಗದಗ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ ಸೇರಿದಂತೆ ಜಿಮ್ಸ್‌ನ ಬ್ಲಡ್ ಬ್ಯಾಂಕಿನ ವೈದ್ಯರು, ಗಣ್ಯರು ಉಪಸ್ಥಿತರಿರುವರು. ಈ ವೇಳೆ ಹಿರಿಯ ವೈದ್ಯರು, ಸಮಾಜ ಸೇವಕರನ್ನು ಸನ್ಮಾನಿಸಲಾಗುವುದು ಎಂದರು.

ಹಿರಿಯ ಪತ್ರಕರ್ತರಾದ ರಮೇಶ ನಾಡಿಗೇರ, ದಿಗಂಬರ ಪೂಜಾರ, ನಾಗರಾಜ ಹಣಗಿ, ಅಶೋಕ ಸೊರಟೂರ, ಸೋಮಣ್ಣ ಯತ್ತಿನಹಳ್ಳಿ, ಶಿವಲಿಂಗಯ್ಯ ಹೊತಗಿಮಠ, ಮಂಜುನಾಥ ರಾಠೋಡ, ಕರಿಯಪ್ಪ ಶಿರಹಟ್ಟಿ, ಪರಮೇಶ ಲಮಾಣಿ ಇದ್ದರು.

## ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದ ವಿದ್ಯಾರ್ಥಿನಿ ಸಾವು

■ ವಿಜಯಸಾಕ್ಷಿ ಸುದ್ದಿ, ಒಡಿಶಾ

ಪ್ರಾಧ್ಯಾಪಕನ ವಿರುದ್ಧ ಲೈಂಗಿಕ ಕಿರುಕುಳದ ದೂರು ನೀಡಿದರೂ ಕಾಲೇಜು ಆಡಳಿತ ಮಂಡಳಿ ಕ್ರಮ ಕೈಗೊಳ್ಳದ ಹಿನ್ನೆಲೆ, ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದ ವಿದ್ಯಾರ್ಥಿನಿ ಸಾವಿಗೀಡಾದ ಘಟನೆ ಒಡಿಶಾದಲ್ಲಿ ನಡೆದಿದೆ.

ಒಡಿಶಾದ ಪ್ರಮುಖ ಸರ್ಕಾರಿ ಕಾಲೇಜಿನ 20 ವರ್ಷದ ವಿದ್ಯಾರ್ಥಿನಿ ಮೂರು ದಿನಗಳ ಕಾಲ ಸಾವು ಬದುಕಿನ ನಡುವೆ ಹೋರಾಡಿ ಸೋಮವಾರ ರಾತ್ರಿ ಕೊನೆಯುಸಿರೆಳೆದಿದ್ದಾರೆ.

### ಶಾರದಾ ಸಂಗೀತ ಗುರುಕುಲದ 14ನೇ ವಾರ್ಷಿಕೋತ್ಸವ, ಗುರುಪೂರ್ಣಿಮಾ ಸಂಗೀತೋತ್ಸವ

# ಸಂಗೀತಕ್ಕೆ ಮಾಂತ್ರಿಕ ಶಕ್ತಿಯಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಂಗೀತ ಕಲಿಯುವದೊಂದು ತಪಸ್ಸಿದ್ದಂತೆ. ಪ್ರಾಮಾಣಿಕತೆ, ಶ್ರದ್ಧೆ, ನಿಷ್ಠೆ, ಗುರುಭಕ್ತಿ, ಸತತ ಅಭ್ಯಾಸದ ಮೂಲಕ ಸಂಗೀತವನ್ನು ಕಲಿಯುವವರಿಗೆ ಸಂಗೀತ ಸರಸ್ವತಿ ಒಲಿಯುತ್ತಾಳೆ. ಗುರು ಪರಂಪರೆಯನ್ನು ಉಳಿಸಿಕೊಂಡು ಹೋಗುತ್ತಿರುವ ಸಂಗೀತಕ್ಕೆ ಮಾಂತ್ರಿಕ ಶಕ್ತಿ ಇದೆ ಎಂದು ನಿವೃತ್ತ ಜಿಲ್ಲಾ ನ್ಯಾಯಾಧೀಶ ಹಾಗೂ ಕೊಳಲು ವಾದಕ ಯೋಗೀಶ ಕರಗುದರಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಎಪಿಎಂಸಿ ಸಭಾ ಭವನದಲ್ಲಿ ಶಾರದಾ ಸಂಗೀತ ಗುರುಕುಲದ 14ನೇ ವಾರ್ಷಿಕೋತ್ಸವ ಮತ್ತು ಗುರುಪೂರ್ಣಿಮಾ ಸಂಗೀತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಾಡಿನ ಹಲವು ಸಂಗೀತ ದಿಗ್ಗಜರು ತಮ್ಮ ಸಂಗೀತದ ಮೂಲಕ ಶ್ರೇಷ್ಠ ಚಿಂತನೆಗಳನ್ನು ಸಾರಿದ್ದಾರೆ. ಶಾಲಾ ಹಂತದಲ್ಲಿಯೇ ಮಕ್ಕಳಿಗೆ ಸಂಗೀತಾಸಕ್ತಿ ಮೂಡಿಸಿದರೆ ಸಂಸ್ಕಾರ, ಮೌಲ್ಯಗಳನ್ನು ರೂಢಿಸಬಹುದು. ಅಶ್ಲೀಲ ಸಾಹಿತ್ಯದ ಇತ್ತೀಚಿನ ಹಾಡುಗಳು ಮತ್ತು ಪಾಶ್ಚಿಮಾತ್ಯ ಸಂಗೀತಗಳಿಗೆ ಮಾರುಹೋಗಿರುವ ಯುವ ಜನತೆಯಿಂದ ನಮ್ಮ ಶ್ರೇಷ್ಠವಾದ ಸಂಗೀತ ಪರಂಪರೆ, ಸಂಸ್ಕೃತಿಯನ್ನು ತಿಳಿಸುವ ಕಾರ್ಯವಾಗಬೇಕು. ಈ ನಿಟ್ಟಿನಲ್ಲಿ ಶಾರದಾ ಸಂಗೀತ ಗುರುಕುಲ ಉತ್ತಮ ಕಾರ್ಯ ಮಾಡುತ್ತಿದೆ ಎಂದರು.




ಸಂಸ್ಥೆಯ ಪ್ರಾಚಾರ್ಯೆ ಗಾಯತ್ರಿ ಕುಲಕರ್ಣಿ ಅವರಿಂದ ಗಾಯನ, ಗದುಗಿನ ಖ್ಯಾತ ತಬಲಾ ವಾದಕ ಪಂ. ವಾಯ್.ಆರ್. ಮೂಲಿಮನಿ, ಗಾಯಕ ಅರ್ಜುನ್ ವಠಾರ, ಚಿದಂಬರ ಜೋಶಿ ಹಾರ್ಮೋನಿಯಂ ವಾದನ, ಯುವ ಕಲಾವಿದ ಪರಶುರಾಮ ಭಜಂತ್ರಿ ಅವರ ಗಾಯನ ಮನಸೂರೆಗೊಂಡಿತು. ಇವರಿಗೆ ಕೃಷ್ಣಕುಮಾರ ಕುಲಕರ್ಣಿ ತಬಲಾ ಸಾಥ್ ನೀಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕೃಷ್ಣ ಕುಲಕರ್ಣಿ ಮತ್ತು ಮುಖ್ಯ ಅತಿಥಿಗಳಾಗಿದ್ದ ಸಾಹಿತಿ ಕೆ.ಎಸ್. ಕೊಡ್ಲಿವಾಡ ಮಾತನಾಡಿ, ಸಂಗೀತ ಪರಂಪರೆಗೆ ತನ್ನದೇ ಆದ ಇತಿಹಾಸವಿದೆ. ಸಂಗೀತ ಕ್ಷೇತ್ರಕ್ಕೆ ಈ ಭಾಗ ತನ್ನದೇ ಆದ ಕೊಡುಗೆ ನೀಡಿದ್ದು, ಸಂಗೀತ ದಿಗ್ಗಜ ಪಂ. ಭೀಮಸೇನ ಜೋಶಿಯವರು ತಮ್ಮ ಬಾಲ್ಯವನ್ನು ಲಕ್ಷ್ಮೇಶ್ವರದಲ್ಲಿ ಕಳೆದಿದ್ದಾರೆ. ಅವರ ತಂದೆ ಪಟ್ಟಣದ ಸರಕಾರಿ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಿರುವದು ನಮಗೆಲ್ಲ ಹೆಮ್ಮೆಯ ಸಂಗತಿಯಾಗಿದೆ. ನಮ್ಮ ಭಾಗದಲ್ಲಿ ಸಂಗೀತ ಪರಂಪರೆಯನ್ನು ಕೃಷ್ಣಕುಮಾರ ಮತ್ತು ಗಾಯತ್ರಿ ದಂಪತಿಗಳು ಮುಂದುವರೆಸಿ, ನೂರಾರು ವಿದ್ಯಾರ್ಥಿಗಳನ್ನು ಸಿದ್ಧಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಭೆಯಲ್ಲಿ ಸಂಸ್ಥೆಯ ಅಧ್ಯಕ್ಷೆ ಶಾರದಾ ಕುಲಕರ್ಣಿ ಉಪಸ್ಥಿತರಿದ್ದರು. ಸತ್ಯನಾರಾಯಣ ತೈಲಂಗ, ಮೃತ್ಯುಂಜಯ ಸಂಕೇಶ್ವರ ಅವರನ್ನು ಸನ್ಮಾನಿಸಲಾಯಿತು. ನಂತರ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಗುರುಕುಲದ ಪುಟ್ಟ ಪುಟ್ಟ ವಿದ್ಯಾರ್ಥಿಗಳು ಸಂಗೀತ ಸೇವೆ, ತಬಲಾ ಸೋಲೋ, ಸಿತಾರವಾದನ ಪ್ರದರ್ಶನ ನೀಡಿ ಗಮನ ಸೆಳೆದರು.

## ಸಾಧಕ ವಿದ್ಯಾರ್ಥಿನಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸನ್ಮಾರ್ಗ ಮಹಾವಿದ್ಯಾಲಯದಲ್ಲಿ 2019-20ನೇ ಸಾಲಿನ ವಿಜ್ಞಾನ ವಿಭಾಗದ ವಿದ್ಯಾರ್ಥಿನಿ ಅಪೇಕ್ಷಾ ಸಿ.ಪಾಟೀಲ ತನ್ನ ಪದವಿ ಪೂರ್ವ ಹಂತದಲ್ಲಿ ಉತ್ತಮ ಶ್ರೇಣಿಯೊಂದಿಗೆ ತೇರ್ಗಡೆ ಹೊಂದಿ ಸದ್ಯ ಐಐಟಿ ಖಾನ್‌ಪೂರ್‌ದಲ್ಲಿ ಪಿ.ಎಚ್.ಡಿ ಶಿಕ್ಷಣವನ್ನು ಮುಂದುವರೆಸಿರುವ ಪ್ರಯುಕ್ತ ಅವರನ್ನು ಕಾಲೇಜು ಆಡಳಿತ ಮಂಡಳಿಯ ವತಿಯಿಂದ ಸನ್ಮಾನಿಸಲಾಯಿತು.

ವಿದ್ಯಾರ್ಥಿನಿಯ ಸಾಧನೆಗೆ ಸಂಸ್ಥೆಯ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೇಮಾನಂದ ರೋಣದ, ನಿರ್ದೇಶಕರಾದ ಪ್ರೊ. ರಾಹುಲ ಒಡೆಯರ್, ಪ್ರೊ. ರೋಹಿತ್ ಒಡೆಯರ್, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯ್ಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿಗಳಾದ ಎಮ್.ಸಿ. ಹಿರೇಮಠ ಸೇರಿದಂತೆ ಕಾಲೇಜಿನ ಸಮಸ್ತ ಬೋಧಕ-ಬೋಧಕೇತರ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದರು.

## ಆಂಗ್ಲ ಮಾಧ್ಯಮ ಶಾಲೆ ಪ್ರಾರಂಭೋತ್ಸವ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮಕ್ಕಳಲ್ಲಿ ಕನ್ನಡದೊಂದಿಗೆ ಆಂಗ್ಲ ಭಾಷಾ ಮಾಧ್ಯಮದಲ್ಲಿಯೂ ಕೌಶಲರಾಗಬೇಕು ಎಂಬ ಉದ್ದೇಶದಿಂದ ಸರಕಾರ ಸರಕಾರಿ ಶಾಲೆಗಳನ್ನು ದ್ವಿಭಾಷಾ ಮಾಧ್ಯಮದ ಶಾಲೆಯನ್ನಾಗಿ ಪರಿವರ್ತಿಸುತ್ತಿರುವುದು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಅನುಕೂಲವಾಗಲಿದೆ ಎಂದು ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ವಿ. ನಡುವಿನಮನಿ ಹೇಳಿದರು.

ಇಲ್ಲಿಯ ಮಾರುತಿ ನಗರದ ಸರಕಾರಿ ಹಿರಿಯ ಹೆಣ್ಣು/ಗಂಡು ಮಕ್ಕಳ ಪ್ರಾಥಮಿಕ ಶಾಲೆಗೆ ಮಂಜೂರಾಗಿರುವ ದ್ವಿಭಾಷಾ ಮಾಧ್ಯಮ ತರಗತಿಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.



ಇಂದಿನ ಸ್ಪರ್ಧಾತ್ಮಕ ಕಾಲದಲ್ಲಿ ಆಂಗ್ಲ ಭಾಷೆ ಮಹತ್ವದ ಪಾತ್ರ ವಹಿಸುತ್ತಿದೆ. ಈ ನಿಟ್ಟಿನಲ್ಲಿ ಶಾಲಾಭಿವೃದ್ಧಿ ಸಮಿತಿ, ಶಾಲಾ ಶಿಕ್ಷಕರು, ಗ್ರಾಮ ಪಂಚಾಯಿತಿಯ ಪ್ರಯತ್ನದಿಂದ ಸರಕಾರದಿಂದ ಮಂಜೂರಿಯಾದ ಆಂಗ್ಲ ಮಾಧ್ಯಮ ಶಾಲೆಗಳಲ್ಲಿ ಇಂದು ಈ ಶಾಲೆಯಲ್ಲಿ ಪ್ರಥಮವಾಗಿ ಆಂಗ್ಲ ಮಾಧ್ಯಮ ಶಾಲೆಗೆ ಚಾಲನೆ ನೀಡಿದ್ದು ಈ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಸರಕಾರಿ ಶಿಕ್ಷಣ ಯೋಜನೆಗಳು ಕೊನೆಯ ಹಂತದ ಮಗುವಿಗೂ ಸಹ ದೊರೆಯುವಂತೆ ಶಿಕ್ಷಕರು ಗಮನ ಹರಿಸಬೇಕೆಂದು ವಿನಂತಿಸಿದರಲ್ಲದೆ, ತರಗತಿಯ ನಿರ್ವಹಣೆಗೆ ಸಮವಸ್ತ್ರಗಳನ್ನು ಶಿಕ್ಷಕಿ ಎಸ್.ಎಂ. ಹೊಸಮನಿ ಹಾಗೂ ಲೇಖನ ಸಾಮಗ್ರಿಗಳನ್ನು ಮುಖ್ಯೋಪಾಧ್ಯಾಯ ಕೆ.ಬಿ. ಕೊಣ್ಣೂರು ಅವರು ನೀಡಿದನ್ನು ಸ್ಮರಿಸಿದರು.

ತಾ.ಪಂ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ, ದತ್ತಾತ್ರೇಯ ಜೋಶಿ, ವೀರಯ್ಯ ಗಂಧಧ, ಗ್ರಾ.ಪಂ ಸದಸ್ಯರಾದ ಶಿವಣ್ಣ ಬಳಿಗೇರ, ಲಕ್ಷ್ಮಣ ಗುಡಸಲಮನಿ, ವಿರೂಪಾಕ್ಷಪ್ಪ ಬೆಟಗೇರಿ, ಫಕೀರಮ್ಮ ಬೇಲೇರಿ, ಹನುಮಂತಪ್ಪ ಬಂಗಾರಿ, ಅಕ್ಷರ ದಾಸೋಹಾಧಿಕಾರಿ ಶಂಕರ ಹಡಗಲಿ, ಪಿ.ಡಿ.ಒ ಅಮೀರನಾಯಕ, ಬಸವರಾಜ ಮುಳ್ಳಾಳ, ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಾಂತೇಶ ಗುರಿಕಾರ, ಮಂಜುಳಾ ಗಡ್ಡಿ, ಮಂಜುನಾಥ ಕಟಿಗ್ಗಾರ, ಗ್ರಾ.ಪಂ ಸದಸ್ಯರು, ಎಸ್.ಡಿ.ಎಂ.ಸಿ ಸದಸ್ಯರು ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯ ಕೆ.ಬಿ. ಕೊಣ್ಣೂರು ಸ್ವಾಗತಿಸಿದರು. ಅಶ್ವಿನಿ ಕೆ.ವಿ ನಿರೂಪಿಸಿದರು. ಪುಷ್ಪಾ ಪ್ರಭು ವಂದಿಸಿದರು.

### ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದಿಂದ ಪೂರ್ವಭಾವಿ ಸಭೆ

# ಸೆ.4ರಂದು ಪತ್ರಿಕಾ ವಿತರಕರ ದಿನ ಆರಚಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಂಗಾಪೂರ ಪೇಟೆಯ ಬನಶಂಕರಿ ದೇವಸ್ಥಾನದ ಆವರಣದಲ್ಲಿ ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಜರುಗಿದ ಪೂರ್ವಭಾವಿ ಸಭೆಯಲ್ಲಿ ಸೆ. 4ರಂದು ಅಖಿಲ ಕರ್ನಾಟಕ ಪತ್ರಿಕಾ ವಿತರಕರ ದಿನ ಆಚರಿಸಲು ನಿರ್ಣಯಿಸಲಾಯಿತು.




ಸಂಘದ ಗದಗ ಜಿಲ್ಲಾಧ್ಯಕ್ಷ ವೀರಬಸಯ್ಯ ವಿರಕ್ತಮಠ ಅಧ್ಯಕ್ಷತೆ ವಹಿಸಿ ಮಾತನಾಡಿ, ಅಖಿಲ ಕರ್ನಾಟಕ ಪತ್ರಿಕಾ ವಿತರಕರ ದಿನ ಆಚರಣೆ ಕಾರ್ಯಕ್ರಮದಲ್ಲಿ ಹಿರಿಯರ ಪತ್ರಿಕಾ ವಿತರಕರಿಗೆ ಸನ್ಮಾನ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಹಾಗೂ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯಧಿಕ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು. ಆಗಸ್ಟ್ 10ರಂದು ಪತ್ರಿಕಾ ವಿತರಕರ ಕುಟುಂಬದವರಿಗೆ ಮನರಂಜನಾ ಕಾರ್ಯಕ್ರಮ, ಆ. 20ರಂದು ಪತ್ರಿಕಾ ವಿತರಕರಿಗೆ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗುವುದು ಎಂದು ತಿಳಿಸಿದರು.

ಸಂಘದ ರಾಜ್ಯಾಧ್ಯಕ್ಷ ಶಂಕರ ಕುದರಿಮೋತಿ, ಸಂಘದ ಜಿಲ್ಲಾ ಉಪಾಧ್ಯಕ್ಷ ಈರಣ್ಣ ಮಳೇಕರ, ಕಾರ್ಯದರ್ಶಿ ಮಂಜುನಾಥ ಕಬನೂರ, ಸಹ ಕಾರ್ಯದರ್ಶಿ ದತ್ತಾತ್ರೇಯ ಮುಂಡರಗಿ, ಖಜಾಂಚಿ ವಿನಾಯಕ ಬದಿ, ಹಿರಿಯ ಸಲಹೆಗಾರರಾದ ಕೆ.ಎಸ್. ಹಿರೇಮಠ, ಪ್ರಮೋದ ಜೋಶಿ, ಸಂಚಾಲಕ ಗಂಗಾಧರ ಮಡ್ಡಿ, ಗಣೇಶ ಶಿರಹಟ್ಟಿ, ಶಂಕರಗುರು ಕಂದಗಲ್ಲ, ಗುರುರಾಜ ಕಲಾಲ, ದಶರಥ ಹೊನ್ನಳ್ಳಿ, ಸಿದ್ದು ಮಡಿವಾಳರ, ಕಿರಣ ಮಡ್ಡಿ, ಮಾರುತಿ ಮುಂಡರಗಿ ಸೇರಿದಂತೆ ಪತ್ರಿಕಾ ವಿತರಕರು ಭಾಗವಹಿಸಿದ್ದರು.

## ಮತಾಂತರದ ಕುತಂತ್ರಕ್ಕೆ ಬಲಿಯಾಗದಿರಿ

▶▶ ಮೊದಲನೇ ಪುಟದಿಂದ

ಇಂತಹ ಮತಾಂತರದ ವಿರುದ್ಧ ಹಿಂದೂಗಳು ಎಚ್ಚೆತ್ತುಕೊಳ್ಳಬೇಕು. ಇಲ್ಲದಿದ್ದರೆ ಧರ್ಮ ಉಳಿಯಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇನ್ನೊಂದು ಪ್ರಕರಣದಲ್ಲಿ ಬೆಟಗೇರಿಯ ಶಮ್ಸುದ್ದಿನ್ ಮತ್ತು ತಂಡದವರು ಹಿಂದೂ ಯುವಕರನ್ನು ಗುರಿಯಾಗಿಸಿ ಮತಾಂತರ ಮಾಡಿಸುತ್ತಾರೆ. ಮತ್ತೋರ್ವ ಹಿಂದೂ ಯುವಕನನ್ನು ಹಿಂದೂ ಸಂಪ್ರದಾಯದಂತೆ ಮುಸ್ಲಿಂ ಹುಡುಗಿಯ ಜೊತೆ ಮದುವೆ ಮಾಡಿಸುತ್ತಾರೆ. ಅವರಿಗೆ ಜನಿಸಿದ ಮಕ್ಕಳಿಗೆ ಮುಸ್ಲಿಂ ಹೆಸರು ಇಡಲಾಗಿದೆ. ತಂದೆಗೆ ತಿಳಿಯದೇ ಮಕ್ಕಳಿಗೆ ಮುಂಜವಿ ಕೂಡ ಮಾಡಲಾಗಿದ್ದು, ಗದಗ ಮತಾಂತರ ತವರೂರುರಾಗಿ ಬದಲಾಗಿದೆ ಎಂದು ಆರೋಪಿಸಿದರು.

ಪೊಲೀಸರು ಈ ಬಗ್ಗೆ ದೂರು ದಾಖಲಿಸಿಕೊಂಡು ತನಿಖೆ ನಡೆಸಿ ಮುಳಗುಂದ ನಾಕಾದ ಮಸಿದಿಯನ್ನು ಸೀಜ್ ಮಾಡಬೇಕು. ಈ ಬಗ್ಗೆ ನಾವು ಪೊಲೀಸ್ ವರಿಷ್ಠಾಧಿಕಾರಿಗಳಲ್ಲಿ ದೂರು ದಾಖಲಿಸಿದ್ದೇವೆ. ಇವರ ಹಿಂದೆ ಕಾಣದ ಕೈಗಳು ದೊಡ್ಡ ಮಟ್ಟದಲ್ಲಿ ಇದ್ದು, ಅವುಗಳನ್ನು ಪತ್ತೆ ಹಚ್ಚಬೇಕಿದೆ. ಜುಲೈ 17ರಂದು ಈ ಕುರಿತು ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಗೃಹ ಸಚಿವರಿಗೆ ಮನವಿ ಸಲ್ಲಿಸಲಾಗುತ್ತದೆ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ರಾಜು ಡಮಾಮ್, ಮಹೇಶ್ ರೋಖಡೆ, ಕುಮಾರ ನಡಗೇರಿ, ರಾಚೋಟಿ ಕಾಡಪ್ಪನವರ, ಕಿರಣ್ ಹಿರೇಮಠ, ಸತೀಶ್ ಕುಂಬಾರ, ಶಿವಯೋಗಿ ಹಿರೇಮಠ, ಅರುಣಕುಮಾರ ಬಜಿ, ಮಂಜುನಾಥ ಬೆಂತೂರ ಉಪಸ್ಥಿತರಿದ್ದರು.

### ಒಡಿಶಾ ವಿದ್ಯಾರ್ಥಿನಿ ಸಾವು 'ವ್ಯವಸ್ಥೆ ಮಾಡಿದ ಕೊಲೆ': ಮೋದಿ ಮೌನ ಪ್ರಶ್ನಿಸಿದ ರಾಹುಲ್ ಗಾಂಧಿ

■ ವಿಜಯಸಾಕ್ಷಿ ಸುದ್ದಿ, ಒಡಿಶಾ

ಪ್ರಾಧ್ಯಾಪಕನ ವಿರುದ್ಧ ಲೈಂಗಿಕ ಕಿರುಕುಳ ಆರೋಪ ಮಾಡಿ ಆತ್ಮಹತ್ಯೆ ಮಾಡಿಕೊಂಡ ಒಡಿಶಾದ ಕಾಲೇಜು ವಿದ್ಯಾರ್ಥಿನಿಯ ಅಂತ್ಯ ಸಂಸ್ಕಾರ ಬಾಲಸೋರ್ ಜಿಲ್ಲೆಯ ಆಕೆಯ ಸ್ವಗ್ರಾಮದಲ್ಲಿ ಮಂಗಳವಾರ ನೆರವೇರಿದೆ. ಕುಟುಂಬ ಸದಸ್ಯರು, ಗ್ರಾಮಸ್ಥರು, ಅಧಿಕಾರಿಗಳು, ಬಾಲಸೋರ್ ಸಂಸದ ಪ್ರತಾಪ್ ಸಾರಂಗಿ ಮತ್ತು ಸಾವಿರಾರು ಜನರು ವಿದ್ಯಾರ್ಥಿನಿಯ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದರು ಎಂದು ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ. ಈ ಘಟನೆಯನ್ನು ಒಡಿಶಾದ ಪ್ರತಿಪಕ್ಷಗಳು ತೀವ್ರವಾಗಿ ಖಂಡಿಸಿದ್ದು, ಬಿಜೆಪಿ ಸರ್ಕಾರದ ವಿರುದ್ಧ ಹರಿಹಾಯ್ದಿವೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ 'ಇದು ವ್ಯವಸ್ಥೆ ನಡೆಸಿದ ಕೊಲೆ' ಎಂದು ಆರೋಪಿಸಿದ್ದಾರೆ.

## ರಾಜ್ಯ ಅತಿಥಿ ಉಪನ್ಯಾಸಕರ ಸಂಘ ಪ್ರ. ಕಾರ್ಯದರ್ಶಿಯಾಗಿ ಶಶಿಕಲಾ ಜೋಳದ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯ ಮಟ್ಟದ ಪದಾಧಿಕಾರಿಗಳ ಹಾಗೂ ಅತಿಥಿ ಉಪನ್ಯಾಸಕರ ಸಾಮಾನ್ಯ ಸಭೆಯ ನಿರ್ಣಯದಂತೆ ಸಂಘದ ನಿಯಮಾನುಸಾರ ರಾಜ್ಯ ಘಟಕದ ನೂತನ ಪ್ರಧಾನ ಕಾರ್ಯದರ್ಶಿಯಾಗಿ ಬಾಗಲಕೋಟೆ ಜಿಲ್ಲೆಯ ಬೀಳಗಿ ಕಾಲೇಜಿನ ಹಿರಿಯ ಮಹಿಳಾ ಅತಿಥಿ ಉಪನ್ಯಾಸಕಿ ಪ್ರೊ. ಶಶಿಕಲಾ ಜೋಳದ ಅವರನ್ನು



ನೇಮಕ ಮಾಡಲಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಆರ್.ಕಲ್ಮನಿ ತಿಳಿಸಿದ್ದಾರೆ.

ಪ್ರಸ್ತುತ ಅತಿಥಿ ಉಪನ್ಯಾಸಕರ ಆಯ್ಕೆಯ ಕುರಿತಂತೆ ಮುಂದಿನ ಹೋರಾಟದ ರೂಪುರೇಷೆ ಚರ್ಚಿಸಿ, ಅತಿಥಿ ಉಪನ್ಯಾಸಕರ ಸದ್ಯದ ಸಮಸ್ಯೆಗಳ ಕುರಿತಂತೆ ರಾಜ್ಯ ಸರ್ಕಾರದ ಗಮನಕ್ಕೆ ತರುವ ನಿರ್ಣಯವನ್ನು ಸಭೆಯಲ್ಲಿ ಕೈಗೊಳ್ಳಲಾಯಿತು. ಸಭೆಯಲ್ಲಿ ರಾಜ್ಯ ಘಟಕದ ಪದಾಧಿಕಾರಿಗಳು, ವಿವಿಧ ಜಿಲ್ಲೆಯ ಅತಿಥಿ ಉಪನ್ಯಾಸಕರ ಸಂಘದ ಪದಾಧಿಕಾರಿಗಳು ಪಾಲ್ಗೊಂಡಿದ್ದರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಸಿಗಳನ್ನು ನೆಟ್ಟು ಪರಿಸರವನ್ನು ಕಾಪಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಗದಗ ಸೆಂಟ್ರಲ್ ವತಿಯಿಂದ 2025-26ನೇ ಸಾಲಿನ ನೂತನ ಪದಾಧಿಕಾರಿಗಳಿಗೆ ಸೇವಾದೀಕ್ಷೆ ಸಮಾರಂಭದ ನಿಮಿತ್ತ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ನಗರದ ರೋ. ಪಿಡಿಜಿ ಡಾ.ಎನ್.ಬಿ. ಪಾಟೀಲ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಪ್ರತಿಯೊಬ್ಬರೂ ಸಸಿಗಳನ್ನು ನೆಟ್ಟು ಅವುಗಳನ್ನು ಜೋಪಾನ ಮಾಡಿದರೆ ಅವು ನಿಮ್ಮನ್ನು ಆರೋಗ್ಯಪೂರ್ಣವಾಗಿರುವಂತೆ ಕಾಪಾಡುತ್ತವೆ ಎಂದರು.



ಈ ಸಂದರ್ಭದಲ್ಲಿ ರೋಟರಿ ಗದಗ ಸೆಂಟ್ರಲ್ ಅಧ್ಯಕ್ಷ ಚೇತನ ಅಂಗಡಿ, ಕಾರ್ಯದರ್ಶಿ ರಾಜು ಉಮನಾಬಾದಿ, ಖಜಾಂಚಿ ಡಾ. ಪ್ರಭು ಗಂಜಿಹಾಳ, ಅಸಿಸ್ಟಂಟ್ ಗವರ್ನರ್ ವಿ.ಕೆ. ಗುರುಮಠ, ಮಾಜಿ ಅಸಿಸ್ಟಂಟ್ ಗವರ್ನರ್ ಮಲ್ಲಿಕಾರ್ಜುನ ಐಲಿ, ರೊ. ಇಂ. ಮೋಹನ ಹುಲಕೋಟಿ, ಡಾ. ಸಿ.ಬಿ. ಹಿರೇಗೌಡರ, ಶಶಿಧರ ದಿಂಡೂರ, ಎಂ.ಸಿ. ಬೇಲೇರಿ, ಎಂ.ಎಂ. ಬಡ್ನಿ, ಪ್ರಕಾಶ ಉಗಲಾಟದ, ಎಸ್. ಆಯ್. ಅಣ್ಣಿಗೇರಿ, ಆರ್.ಬಿ. ದಾನಪ್ಪಗೌಡರ, ಸಂತೋಷ ತೆ-ಣಟಗಂಟಿ, ವಿಜಯಕುಮಾರ ಹಿರೇಮಠ, ಚಂದ್ರಗೌಡ ಹಿರೇಗೌಡರ, ಮಂಜುನಾಥ ಕಬಾಡಿ, ಶ್ರೀಕಾಂತ ಲಕ್ಕುಂಡಿ, ರಾಜು ಕುರಡಗಿ, ಶರಣಬಸಪ್ಪ ಗುಡಿಮನಿ, ಈಶಣ್ಣ ಗದ್ದಿಕೇರಿ, ಬಿ.ಬಿ. ಸಂಕನಗೌಡರ, ರಾಜು ಕಂಟಿಗೊಣ್ಣವರ, ಸಿ.ಜಿ. ಹಿರೇಗೌಡರ, ಮಲ್ಲಿಕಾರ್ಜುನ ಚಂದಪ್ಪನವರ, ಪರಶುರಾಮ ನಾಯ್ಕರ್, ವಿನಯ ವಿ.ಅಂಗಡಿ ಮೊದಲಾದವರು ಪಾಲ್ಗೊಂಡಿದ್ದರು.

ಶ್ರೀ ಶಂಕರ ಸಾಂಸ್ಕೃತಿಕ ಭವನದ ಮೊದಲ ಮಹಡಿ ಉದ್ಘಾಟಿಸಿದ ಸಚಿವ ಡಾ. ಎಚ್.ಕೆ. ಪಾಟೀಲ

# ಭವನವು ತತ್ವಜ್ಞಾನ ಪ್ರಸರಣದ ಕೇಂದ್ರವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಶಂಕರಮಠ ಸೇವಾ ಸಮಿತಿ ವತಿಯಿಂದ ಭವ್ಯವಾಗಿ ನಿರ್ಮಾಣಗೊಂಡಿರುವ ಶ್ರೀ ಶಂಕರ ಸಾಂಸ್ಕೃತಿಕ ಭವನವು ತತ್ವಜ್ಞಾನ ಪ್ರಸಾರದ ಶಕ್ತಿ ಕೇಂದ್ರವಾಗಲಿ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವರಾದ ಡಾ. ಎಚ್. ಕೆ. ಪಾಟೀಲ ಆಶಿಸಿದರು.

ಗದುಗಿನ ಸಂಭಾಪುರ ರಸ್ತೆಯ ಕೇಶವ ಪಾರ್ಕ್‌ನಲ್ಲಿರುವ ಶ್ರೀ ಶಂಕರಮಠದ ಆವರಣದ ಶ್ರೀ ಶಂಕರ ಸಾಂಸ್ಕೃತಿಕ ಭವನದ ಮೊದಲ ಮಹಡಿಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

'ಜ್ಞಾನವೇ ಶಕ್ತಿ' ಎಂದು ವಿದ್ವಾಂಸರು ಹೇಳಿದ್ದಾರೆ. ಅದರಂತೆ ಶಂಕರ ಸಾಂಸ್ಕೃತಿಕ ಭವನವು ಮಂಗಲ ಕಾರ್ಯಗಳು ಹಾಗೂ ಸಭೆ-ಸಮಾರಂಭಗಳಿಗೆ ಸೀಮಿತವಾಗದೇ ಜ್ಞಾನದ ಅತ್ಯುನ್ನತ ತತ್ವವಾದ ಅದ್ವೈತ ತತ್ವ ಪ್ರಸಾರ ಕಾರ್ಯ ಕೈಗೊಳ್ಳಲಿ ಎಂದು ಶುಭ ಹಾರೈಸಿದರು.

ಸಮಾರಂಭದಲ್ಲಿ ಉಪಸ್ಥಿತರಿದ್ದ ಶಂಕರ ಮಠ ಸೇವಾ ಸಮಿತಿಯ ಪ್ರದಾನ ಕಾರ್ಯದರ್ಶಿ ವೇ.ಮೂ ಡಾ.



ರತ್ನಾಕರಭಟ್ ಜೋಶಿ ಮಾತನಾಡಿ, ಶ್ರೀ ಶಂಕರಮಠ ಸ್ಥಾಪನೆಗೆ ಮೂಲ ಪ್ರೇರಣೆ ನೀಡಿದವರು ಕೆ.ಎಚ್. ಪಾಟೀಲರು ಹಾಗೂ ಅವರು ಗೋಂದಾವಲಿ ಬ್ರಹ್ಮಚೈತನ್ಯ ಮಹಾರಾಜರು. ಸದ್ಭಕ್ತರು ಅವರ ಆಶಯದಂತೆ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಸಚಿವರಾದ ಎಚ್. ಕೆ. ಪಾಟೀಲ, ಶಂಕರ ಸಾಂಸ್ಕೃತಿಕ ಭವನ ನಿರ್ಮಾಣಗೊಳ್ಳಲು ವಿಶೇಷ ಸಹಾಯಕ ಸಹಕಾರ, ಸರಕಾರದ ಅನುದಾನವನ್ನು ನೀಡಿದ್ದಾರೆ. ಹೀಗಾಗಿ ಕೆ.ಎಚ್. ಪಾಟೀಲರ ಭಾವಚಿತ್ರ ಅನಾವರಣ ಔಚಿತ್ಯಪೂರ್ಣವಾಗಿದೆ. ಅಲ್ಲದೆ, ಮಾಜಿ ಸಂಸದರಾದ ಶಿವಕುಮಾರ ಉದಾಸಿ, ವಿಧಾನಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರರೂ ಸಹ ಸರಕಾರದ ಅನುದಾನ ನೀಡಿದ್ದಾರೆ ಎಂದು ಸ್ಮರಿಸಿದರು.

ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ ಮಾತನಾಡಿ ಬ್ರಾಹ್ಮಣ ಸಮುದಾಯವು ಸಂಖ್ಯೆಯಲ್ಲಿ ಚಿಕ್ಕದಾದರೂ ಸಮಸ್ತ ಸಮಾಜಕ್ಕೆ ಜ್ಞಾನ ಮತ್ತು ಸಂಸ್ಕಾರದ ಮೂಲಕ ಮಾರ್ಗದರ್ಶಿ ಸಮುದಾಯವಾಗಿದೆ ಎಂದು ಹೇಳಿದರು.



ವೀರನಾರಾಯಣ ವ ತ್ರಿಕೂಟೇಶ್ವರ ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಕುಶಾಲ ಗೋಡಖಿಂಡಿ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಹೆಸರಾಂತ ವೈದ್ಯರಾದ ಸೌ. ಡಾ. ರಾಧಿಕಾ ಕುಲಕರ್ಣಿ, ನಿವೃತ್ತ ಪ್ರಾಧ್ಯಾಪಕ ಡಾ. ಆರ್. ಆರ್. ಜೋಶಿ, ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಶಂಕರ ಮಠ ಸೇವಾ ಸಮಿತಿಯ ಅಧ್ಯಕ್ಷ ಡಾ. ಜಿ.ಆರ್. ನೆರ್ಲೇಕರ್ ಉಪಸ್ಥಿತರಿದ್ದರು. ವಿಶೇಷ ಆಮಂತ್ರಿತರಾಗಿ ಡಾ. ಉದಯ ಕುಲಕರ್ಣಿ, ಗದಗ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ, ನಗರಸಭಾ ಸಸದ್ಯರಾದ ಲಲಿತಾ ಅಸೂಟಿ ಪಾಲ್ಗೊಂಡಿದ್ದರು.

ವೇ. ಮೂ. ದತ್ತಂಭಟ್ ತೆಂಬದಮನಿ, ಅಪ್ಪಣ್ಣ ಸೊರಟೂರ ಹಾಗೂ ಬ್ರಹ್ಮ ವೃಂದದವರು ವೇದಘೋಷ ನೆರವೇರಿಸಿದರು. ಸೌಜನ್ಯ ತೆಂಬದಮನಿ, ಪೂರ್ಣ ಕುಲಕರ್ಣಿ ಪ್ರಾರ್ಥಿಸಿದರು. ಪ್ರೊ. ಅನಿಲ ವೈದ್ಯ ಸ್ವಾಗತಿಸಿದರು, ಡಾ. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಗದುಗಿನ ರಾಮಕೃಷ್ಣ-ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ಪರಮಪೂಜ್ಯ ನಿರ್ಭಯಾನಂದ ಸರಸ್ವತಿ ಮಹಾಸ್ವಾಮಿಗಳವರು ಮಾತನಾಡಿ, ತಾತ್ವಿಕವಾಗಿ ಸರ್ವರ ಸಮಾನತೆಯನ್ನು ಸಾರುವ ಅದ್ವೈತ ತತ್ವಜ್ಞಾನವು ಜಗತ್ತಿನ ಸರ್ವ ತತ್ವಗಳಿಗೂ ಅನ್ವಯಿಸುವ ಅತ್ಯಂತ ಶ್ರೇಷ್ಠ ತತ್ವವಾಗಿದೆ. ಶಂಕರರ ಜೀವನ ಮತ್ತು ಬೋಧನೆಗಳ ಪ್ರಸರಣ ಕಾರ್ಯ ಸಾಂಸ್ಕೃತಿಕ ಭವನಗಳಿಂದ ನೆರವೇರಲಿ ಎಂದು ನುಡಿದರು.

ಶಂಕರಮಠ ಸೇವಾ ಸಮಿತಿ ಕೋಶಾಧ್ಯಕ್ಷ ಎ.ಡಿ. ಗೋಡಖಿಂಡಿ ವಂದಿಸಿದರು.

ಸಮಾರಂಭದಲ್ಲಿ ರವೀಂದ್ರ ಜೋಶಿ, ಅನಿಲ ತೆಂಬದಮನಿ, ಅನಿಲ ಪುರಾಣಿಕ, ಕಲಾವತಿ ಅಲಬೂರ, ಪ್ರಸನ್ನಕುಮಾರ ಇನಾಮಾರ, ಕೃಷ್ಣಾಜಿ ನಾಡಿಗೇರ, ಅಜಯಕುಮಾರ ದಪ್ತರದಾರ, ಶಂಕರಮಠ ಸೇವಾ ಸಮಿತಿ ಸದಸ್ಯರು, ಬ್ರಾಹ್ಮಣ ಸಮಾಜದ ಬಾಂಧವರು ಪಾಲ್ಗೊಂಡಿದ್ದರು.

ಸಾಮಾಜಿಕ-ಆರ್ಥಿಕ ಅಭಿವೃದ್ಧಿ ಕಾರ್ಯಾಗಾರಕ್ಕೆ ಚಾಲನೆ ನೀಡಿದ ಪಿಎಸ್‌ಐ ಲಕ್ಷ್ಮಣ ಎಂ.ಆರಿ

## ಹಣಕಾಸು ಸಾಕ್ಷರತೆಯಿಂದ ಮಹಿಳೆಯರ ಆರ್ಥಿಕ ಅಭಿವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಆಧುನಿಕ ಸಮಾಜದಲ್ಲಿ ಎಲ್ಲ ರಂಗಗಳಲ್ಲಿ ಅಭಿವೃದ್ಧಿ ಹೊಂದುತ್ತಿರುವ ಮಹಿಳೆಯರು ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಅಗತ್ಯ ಮಾಹಿತಿ ಹಾಗೂ ಆರ್ಥಿಕ ನೆರವನ್ನು ಪಡೆದು ಜವಾಬ್ದಾರಿಯುತ ಯಶಸ್ವಿ ಮಹಿಳೆಯಾಗಿ ಗುರುತಿಸಿಕೊಳ್ಳಬೇಕು. ಹಣಕಾಸು ಸಾಕ್ಷರತೆಯಿಂದ ಮಾತ್ರ ಮಹಿಳೆಯರ ಆರ್ಥಿಕ ಅಭಿವೃದ್ಧಿ ಸಾಧ್ಯ ಎಂದು ಬೆಟಗೇರಿ ಪೊಲೀಸ್ ಠಾಣೆಯ ಪಿಎಸ್‌ಐ ಲಕ್ಷ್ಮಣ ಎಂ.ಆರಿ ಹೇಳಿದರು.

ಬೆಟಗೇರಿ ಹಳೆ ಬನಶಂಕರಿದೇವಿ ಸಮುದಾಯ ಭವನದಲ್ಲಿ ಕ್ರೆಡಿಟ್ ಆಕ್ಸಿಸ್ ಗ್ರಾಮೀಣ ಲಿಮಿಟೆಡ್ ಗದಗ ಶಾಖೆಯಿಂದ ಮಹಿಳೆಯರಿಗಾಗಿ ಏರ್ಪಡಿಸಿದ್ದ ಸಾಮಾಜಿಕ, ಆರ್ಥಿಕ ಅಭಿವೃದ್ಧಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ತಮ್ಮ ಆರ್ಥಿಕ ಅಭಿವೃದ್ಧಿಗಾಗಿ ಮೈಕ್ರೊ ಫೈನಾನ್ಸ್‌ಗಳು ನೀಡುವ ಸಾಲವನ್ನು ಅಗತ್ಯವಿದ್ದಷ್ಟೇ



ಪಡೆದು ನಿಗದಿತ ಕಾರ್ಯಕ್ಕೆ ಬಳಸಿ, ಲಾಭದಾಯಕ ಉದ್ಯೋಗ ಮಾಡಿ. ಅದರಿಂದ ಬರುವ ಆದಾಯದಿಂದ ತಾವು ಪಡೆದ ಸಾಲವನ್ನು ಜವಾಬ್ದಾರಿಯಿಂದ ಮರಳಿ ಪಾವತಿಸಿ ಸಮಾಜದಲ್ಲಿ ಸದೃಢವಾಗಿ ಬೆಳೆಯಬೇಕು. ಕ್ರೆಡಿಟ್ ಆಕ್ಸಿಸ್ ಗ್ರಾಮೀಣ ಲಿಮಿಟೆಡ್, ಮೈಕ್ರೋ ಫೈನಾನ್ಸ್ ಹಾಗೂ ಇತರೆಡೆಗಳಲ್ಲಿ ತಾವು ಪಡೆದ ಸಾಲವನ್ನು ಸಮಯಕ್ಕೆ ಸರಿಯಾಗಿ ಮರುಪಾವತಿಸಬೇಕು. ಆ ಮೂಲಕ ಸಮಾಜದಲ್ಲಿ ಜವಾಬ್ದಾರಿಯುತ, ಸದೃಢ ಮಹಿಳೆಯರಾಗಬೇಕು ಎಂದು ಅವರು ಹೇಳಿದರು.

ಜವಾಬ್ದಾರಿಯುತ ಸಾಲ, ಕ್ರೆಡಿಟ್ ಶಿಸ್ತು ಹಾಗೂ

ಮಕ್ಕಳಿಗೆ ಮೊಬೈಲ್ ಗೀಳನ್ನು ಬಿಡಿಸಿ ಪುಸ್ತಕ ಓದುವುದನ್ನು ರೂಢಿ ಮಾಡಿಸಬೇಕು. ಸಾಧ್ಯವಾದಷ್ಟು ಮಕ್ಕಳನ್ನು ಮೊಬೈಲ್ ಗೀಳಿನಿಂದ ದೂರವಿಡಬೇಕು. ಮಹಿಳೆಯರು ಬಸ್ ಹತ್ತುವಾಗ ಹುಷಾರಾಗಿರಬೇಕು. 18 ವರ್ಷಕ್ಕಿಂತ ಚಿಕ್ಕ ಮಕ್ಕಳಿಗೆ ಬೈಕ್‌ಗಳನ್ನು ಕೊಡಬೇಡಿ. ಗುಣಮಟ್ಟದ ಶಿಕ್ಷಣ ನೀಡಿ, ಮಕ್ಕಳಲ್ಲಿ ಪ್ರಾಮಾಣಿಕತೆ, ಸ್ವಾಭಿಮಾನ, ಶ್ರಮ ಸಂಸ್ಕೃತಿಯನ್ನು ತುಂಬಿ ಇಂದಿನ ಆಧುನಿಕ ಜಗತ್ತಿನಲ್ಲಿ ಸದೃಢವಾಗಿ ಬಾಳುವಂತೆ ಸಿದ್ಧಗೊಳಿಸಬೇಕು ಎಂದು ಪಿಎಸ್‌ಐ ಲಕ್ಷ್ಮಣ ಎಂ.ಆರಿ ಕರೆ ನೀಡಿದರು.

ಹಣಕಾಸು ಸಾಕ್ಷರತೆಯ ಕುರಿತು ಕ್ರೆಡಿಟ್ ಆಕ್ಸಿಸ್ ಗ್ರಾಮೀಣ ಲಿಮಿಟೆಡ್ ಬೆಳಗಾವಿ ವಿಭಾಗೀಯ ವ್ಯವಸ್ಥಾಪಕ ರವಿ ಎಸ್.ಎನ್ ಮಾತನಾಡಿ, ರಾಜ್ಯದಲ್ಲಿ 12 ಲಕ್ಷ ಕುಟುಂಬಗಳಿಗೆ ಆರ್ಥಿಕ ಭದ್ರತೆಯನ್ನು ನೀಡುವ ಜೊತೆಗೆ ಆ ಕುಟುಂಬದ ಮಹಿಳೆಯರಲ್ಲಿ ಸ್ವಾಭಿಮಾನದ ಬದುಕು ರೂಪಿಸಿಕೊಟ್ಟು, ಅವರನ್ನು ಆರ್ಥಿಕವಾಗಿ ಬಲಗೊಳಿಸುವಲ್ಲಿ ತಮ್ಮ ಸಂಸ್ಥೆ ಮುಂಚೂಣಿಯಲ್ಲಿದೆ ಎಂದರು.

ಹಣಕಾಸು ಸಾಕ್ಷರತೆ ಕುರಿತು ಕ್ರೆಡಿಟ್ ಆಕ್ಸಿಸ್ ಗ್ರಾಮೀಣ ಲಿಮಿಟೆಡ್ ಹಾವೇರಿ ಪ್ರಾದೇಶಿಕ ವ್ಯವಸ್ಥಾಪಕರಾದ ನಾಗಪ್ಪ ಸಿ ಮಾತನಾಡಿದರು. ಗದಗ ಸೈಬರ್ ಪೊಲೀಸ್ ಠಾಣೆಯ ಸಿಬ್ಬಂದಿ ಶಿವಕುಮಾರ ಹರ್ಲಾಪೂರ ಮಾತನಾಡಿ, ಡಿಜಿಟಲ್ ವಂಚನೆಗಳ ತಡೆಗಟ್ಟುವಿಕೆ ಕುರಿತು ಮಹಿಳೆಯರಲ್ಲಿ ಜಾಗೃತಿ ಮೂಡಿಸಿದರು.

ಆರ್ಥಿಕ ನೆರವನ್ನು ಪಡೆದು ಸ್ವ ಉದ್ಯೋಗಿಗಳಾಗಿ ಜೀವನ ನಿರ್ವಹಿಸುತ್ತಿರುವ ಮಹಿಳೆಯರಾದ ನಿರ್ಮಲಾ ಕಮಲಾಕ್ಷಿ, ಭಾಗ್ಯವತಿ, ಶಶಿಕಲಾ ಚಕ್ರಸಾಲಿ ಅವರು ತಾವು ಸಾಲ ಸದ್ಬಳಕೆ ಮಾಡಿಕೊಂಡು ಜೀವನ ನಿರ್ವಹಣೆ ಮಾಡುತ್ತಿರುವ ಅನುಭವವನ್ನು ಹಂಚಿಕೊಂಡರು.

ಎಎಸ್‌ಐ ಬಿ.ಬಿ. ಜಕ್ಕಣ್ಣವರ, ಬೆಳಗಾವಿ ಡಿವಿಜಿನಲ್ ವ್ಯವಸ್ಥಾಪಕ ಮಾದೇಗೌಡ, ಹುಬ್ಬಳ್ಳಿ ಶಾಖೆ ವ್ಯವಸ್ಥಾಪಕ ಆನಂದ ಲಮಾಣಿ, ಏರಿಯಾ ಮ್ಯಾನೇಜರ್ ಚಂದ್ರಪ್ಪ ಅರ್ಕಸಾಲಿ ವೇದಿಕೆಯಲ್ಲಿದ್ದರು. ನೇತ್ರಾವತಿ ಪ್ರಾರ್ಥಿಸಿದರು. ಈರಣ್ಣ ಎಂ.ಎಚ್ ಸ್ವಾಗತಿಸಿದರು. ರಾಘವೇಂದ್ರ ಕಾರ್ಯಕ್ರಮ ನಿರೂಪಿಸಿದರು. ಗದಗ ಶಾಖೆ ವ್ಯವಸ್ಥಾಪಕ ಬಸಪ್ಪ ಸ್ವಾದಿ ವಂದಿಸಿದರು.

## ಆ್ಯಂಗ್ಲೋ ಉರ್ದು ಪ್ರೌಢಶಾಲೆಯಲ್ಲಿ ಪಾಲಕರ ಸಭೆ




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆ್ಯಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಪಾಲಕರ ಸಭೆಯನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಿಕ್ಷಣ ಸಂಸ್ಥೆಯ ಸದಸ್ಯ ಪ್ರೊ. ಎ.ಎಂ. ಮುಲ್ಲಾ, ಇಂದಿನ ಮಕ್ಕಳೇ ನಾಳಿನ ನಾಗರಿಕರು. ಆದ್ದರಿಂದ ಮಕ್ಕಳು ಈಗಿನಿಂದಲೇ ಅಭ್ಯಾಸದೊಂದಿಗೆ ಒಳ್ಳೆಯ ಗುಣಗಳನ್ನು ಬೆಳೆಸಿಕೊಳ್ಳಬೇಕು. ಮಕ್ಕಳು ಯಶಸ್ಸು ಹೊಂದಲು ಪಾಲಕರು, ಶಿಕ್ಷಕರು ಹಾಗೂ ಮಕ್ಕಳು ಈ ಮೂವರಲ್ಲಿ ಹೊಂದಾಣಿಕೆ ಅವಶ್ಯವಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯು ಶಿಕ್ಷಕರು ಹೇಳಿದ ಪ್ರತಿಯೊಂದು ವಿಷಯವನ್ನು ಗಮನವಿಟ್ಟು ಕೇಳಿ ಮನೆಯಲ್ಲಿ ಅಭ್ಯಾಸ ಮಾಡಿದರೆ ಯಶಸ್ಸು ಸಿಕ್ಕೆ ಸಿಗುತ್ತದೆ ಎಂದರು.

ಸಂಸ್ಥೆಯ ಸದಸ್ಯರಾದ ಜನಾಬ ಸಯ್ಯದ ಇಸ್ಮಾಯಲ್ ಬಿಜಾಪುರ ಮಾತನಾಡುತ್ತ, ಪಾಲಕರು ತಮ್ಮ ಮಕ್ಕಳ ಅಭ್ಯಾಸದ ಬಗ್ಗೆ ಸದಾ ಕಾಳಜಿಯನ್ನು ವಹಿಸಿ. ಮಕ್ಕಳು ಮೊಬೈಲ್‌ನಿಂದ ದೂರ ಇರುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಸಂಸ್ಥೆಯ ಸದಸ್ಯರುಗಳಾದ ಹಾಜಿ ಮಹಮ್ಮದ ಇಕ್ಬಾಲ್ ಹಣಗಿ ಹಾಗೂ ಉಭಯ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರುಗಳಾದ ಎಲ್.ಆರ್. ಇಟಗಿ ಮತ್ತು ಎಂ.ಎ. ರಿಕಾರ್ಟಿ, ಶಿಕ್ಷಕ, ಶಿಕ್ಷಕಿಯರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು, ಪಾಲಕರು ಉಪಸ್ಥಿತರಿದ್ದರು.

ಎಲ್.ಅರ್. ಇಟಗಿ ಸ್ವಾಗತಿಸಿದರು. ಝಡ್.ಎ. ಮುಲ್ಲಾ ನಿರೂಪಿಸಿದರು. ಎಂ.ಎ. ರಿಕಾರ್ಟಿ ವಂದಿಸಿದರು.

## ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮೀನುಗಾರಿಕಾ ಇಲಾಖೆಯಿಂದ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯ 2024/25 ನೇ ಸಾಲಿನ ಮತ್ತು ಹಿಂದಿನ ಸಾಲಿನಲ್ಲಿ ಅನುಷ್ಠಾನವಾಗದೇ ಬಾಕಿ ಉಳಿದ ಗುರಿಗಳ ಫಲಾನುಭವಿ ಆಧಾರಿತ ವಿವಿಧ ಘಟಕಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಹೊಸದಾಗಿ ಮೀನುಮರಿ ಪಾಲಾನಾ ಕೊಳಗಳ ನಿರ್ಮಾಣ ಮೀನು ಕೃಷಿ ಕೊಳ ನಿರ್ಮಾಣ , ಮೀನು ಮಾರಾಟಕ್ಕೆ ತ್ರಿವೀಲರ್ ಮತ್ತು ಐಸ್ ಬಾಕ್ಸ್ ಸಹಾಯಧನ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯ ಮಾರ್ಗಸೂಚಿಯಂತೆ ಮತ್ತು ಕೇಂದ್ರ ಕಚೇರಿಯಿಂದ ಹೊರಡಿಸಿರುವ ಸುತ್ತೋಲೆಯಂತೆ ಅನುಷ್ಠಾನ ಮಾಡಲಾಗುವುದು. ಅರ್ಹ ಆಸಕ್ತ, ಫಲಾನುಭವಿಗಳು ಸಂಬಂಧಪಟ್ಟ ದಾಖಲೆಗಳೊಂದಿಗೆ ಮೀನುಗಾರಿಕಾ ಸಹಾಯಕ ನಿರ್ದೇಶಕರು ಗದಗ ಮತ್ತು ಮುಂಡರಗಿ ಕಚೇರಿಗೆ 2025 ರ ಆಗಸ್ಟ್ 5ರೊಳಗೆ ಅರ್ಜಿ ಸಲ್ಲಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯರ ಭೇಟಿ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೇಂದ್ರ ಸರ್ಕಾರದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯರುಗಳಾದ ಜಂಟಿ ಸಲಹೆಗಾರ ಡಾ. ಪವನ ಕುಮಾರ್ ಸಿಂಗ್, ಹಿರಿಯ ಸಂಶೋಧನಾ ಅಧಿಕಾರಿ ಅಭಿಷೇಕ್ ಶರ್ಮಾ, ಹಿರಿಯ ಸಮಾಲೋಚಕ ಕುಲಾಲ್ ಚಕ್ರವರ್ತಿ ಸೇರಿದಂತೆ ನಾಲ್ಕು ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲೆಗಳಲ್ಲಿ ಸುಧಾರಿತ ಮತ್ತು ಪರಿಣಾಮಕಾರಿ ವಿಪತ್ತು ನಿರ್ವಹಣೆ ಕುರಿತು ಕಲಬುರ್ಗಿ, ಗದಗ, ಧಾರವಾಡ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯರುಗಳೊಂದಿಗೆ ಹುಬ್ಬಳ್ಳಿಯ ಸರ್ಕಾರಿ ಅತಿಥಿ ಗೃಹದಲ್ಲಿ ಸೋಮವಾರ ಸಭೆ ಜರುಗಿತು.

ಹುಬ್ಬಳ್ಳಿ ನಗರದ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸಹಾಯವಾಣಿ ಕೇಂದ್ರಕ್ಕೆ ಭೇಟಿ ನೀಡಿ ವಿಪತ್ತಿನ ಕುರಿತು ಪೂರ್ವಸಿದ್ಧತೆ ಮತ್ತು ಸಾರ್ವಜನಿಕರಿಗೆ ಮಾಹಿತಿ ನೀಡುವ ಕುರಿತು ಪರಿಶೀಲಿಸಿ, ಮಹಾನಗರ ಪಾಲಿಕೆಯ ಆಯುಕ್ತರೊಂದಿಗೆ ಚರ್ಚೆ ಮಾಡಿದರು. ನವಲಗುಂದ ತಾಲೂಕಿನ ಬೆಣ್ಣೆಹಳ್ಳ ಮತ್ತು ತುಪ್ಪರಿ ಹಳ್ಳಗಳ ಪ್ರವಾಹಕ್ಕೆ ಒಳಪಡುವ ಗ್ರಾಮಗಳಿಗೆ ಭೇಟಿ ನೀಡಿ, ಪ್ರವಾಹದ ಕುರಿತು ವೀಕ್ಷಣೆ ಮಾಡಿದರು.

ಈ ಸಂದರ್ಭದಲ್ಲಿ ನವಲಗುಂದ ವಿಧಾನಸಭಾ ಕ್ಷೇತ್ರ ಶಾಸಕ ಎನ್.ಎಚ್. ಕೋನರಡ್ಡಿ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ತಹಸೀಲ್ದಾರ ಸುಧೀಂದ್ರ ಸಾವುಕಾರ ಹಾಗೂ ಸಂಬಂಧಿಸಿದ ಅಧಿಕಾರಿಗಳು ಉಪಸ್ಥಿತರಿದ್ದರು.

## ವೇತನವಿಲ್ಲದೇ ಜೀವನ ನಡೆಸುವುದು ಕಷ್ಟವಾಗಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ ಆರು ತಿಂಗಳ ವೇತನ ಬಾಕಿ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ನರೇಗಾ ನೌಕರರು ನಡೆಸುತ್ತಿರುವ ಅಸಹಕಾರ ಚಳುವಳಿ 9ನೇ ದಿನಕ್ಕೆ ಮುಂದುವರೆದಿದ್ದು, ಪ್ರತಿಭಟನೆಯಲ್ಲಿ ಪಾಲ್ಗೊಂಡ ನರೇಗಾ ನೌಕರರ ಸಮಸ್ಯೆಗಳ ಬಗ್ಗೆ ಸರಕಾರದ ಗಮನ ಸೆಳೆಯುವಂತೆ ಆಗ್ರಹಿಸಿ ಮಂಗಳವಾರ ಶಾಸಕ ಡಾ. ಚಂದ್ರು ಲಮಾಣಿಯವರಿಗೆ ಮನವಿ ಅರ್ಪಿಸಿದರು.

ನರೇಗಾ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನೌಕರರು ಜುಲೈ 7ರಿಂದ ಅಸಹಕಾರ ಚಳುವಳಿ ಆರಂಭಿಸಿದ್ದು, ವೇತನ ವಿಳಂಬ, ಆರೋಗ್ಯ ವಿಮೆ




ಹಾಗೂ ಭದ್ರತೆ ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸುತ್ತಿದ್ದಾರೆ. ಅಸಹಕಾರ ಚಳವಳಿ ಹಮ್ಮಿಕೊಂಡಿದ್ದ ಸ್ಥಳಕ್ಕೆ ಆಗಮಿಸಿದ ಶಾಸಕರಿಗೆ ತಾಲೂಕು ಪಂಚಾಯಿತಿ ಕಚೇರಿಯಲ್ಲಿ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಹೋರಾಟಗಾರರು ಕಳೆದ ಆರು ತಿಂಗಳಿನಿಂದ ವೇತನವಿಲ್ಲದೇ ಜೀವನ ನಡೆಸುವುದು ಕಷ್ಟವಾಗಿದ್ದು, ಮಕ್ಕಳ ಶಾಲಾ ಶುಲ್ಕ, ವೈದ್ಯಕೀಯ ಸೇವೆಗಳಿಗೆ ಇನ್ನೊಬ್ಬರಲ್ಲಿ ಅಂಗಲಾಚುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ಸಮಸ್ಯೆ ಬಗೆಹರಿಸುವಂತೆ ತಮ್ಮ ಅಳಲು ತೋಡಿಕೊಂಡರು.

ಮನವಿ ಸ್ವೀಕರಿಸಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಸರ್ಕಾರ ಸಮಸ್ಯೆಗಳ ಬಗ್ಗೆ ಗಮನ ಹರಿಸಬೇಕು. ಕೆಳಹಂತದಲ್ಲಿ ಕೆಲಸ ಮಾಡುವ ನೌಕರರಿಗೆ ಆರು ತಿಂಗಳ ವೇತನ ಇಲ್ಲ ಎಂದರೆ ಕಷ್ಟವಾಗುತ್ತದೆ. ಸರ್ಕಾರ ಆದಷ್ಟು ಬೇಗ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದರಲ್ಲದೇ, ಈಗಾಗಲೇ ಸರ್ಕಾರದ ಅಧಿಕಾರಿಗಳು, ಸಚಿವರೊಂದಿಗೆ ಮಾತನಾಡಿದ್ದು, ಆದಷ್ಟು ಬೇಗ ನಿಮ್ಮ ಸಮಸ್ಯೆ ಬಗೆಹರಿಸುವಂತೆ ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ತಾಂತ್ರಿಕ ಸಂಯೋಜಕರು, ಎಂಐಎಸ್ ಸಂಯೋಜಕರು, ಟಿಐಇಸಿ ಸಂಯೋಜಕರು, ತಾಂತ್ರಿಕ ಸಹಾಯಕರು, ಬಿಎಫ್‌ಟಿ, ಗ್ರಾಮ ಕಾಯಕ ಮಿತ್ರರು, ತಾಂಡಾ ರೋಜಗಾರ ಮಿತ್ರರು ಇದ್ದರು.

## ಬಿಹಾರ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ವರದಿ: ಪತ್ರಕರ್ತ ಅಜಿತ್ ಅಂಜುಮ್ ವಿರುದ್ಧ ಎಫ್‌ಐಆರ್

■ ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರದ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಹಸ್ತಕ್ಷೇಪ ಮಾಡಿದ ಮತ್ತು ಕೋಮು ಸಂಘರ್ಷವನ್ನು ಪ್ರಚೋದಿಸಿದ ಆರೋಪದ ಮೇಲೆ ಹಿರಿಯ ಪತ್ರಕರ್ತರೊಬ್ಬರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸ್ ಮೂಲಗಳನ್ನು ಉಲ್ಲೇಖಿಸಿ ಸೋಮವಾರ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ. ಜುಲೈ 12ರಂದು ಬಾಲಿಯಾದ ಮತಗಟ್ಟೆಗೆ ಭೇಟಿ ನೀಡಿದ ನಂತರ ಪ್ರಶಸ್ತಿ ವಿಜೇತ ಪತ್ರಕರ್ತ ಅಜಿತ್ ಅಂಜುಮ್ ಅವರ ವಿರುದ್ಧ ಭಾರತೀಯ ನ್ಯಾಯ ಸಂಹಿತೆ, 2023 ಮತ್ತು ಜನತಾ ಪ್ರಾತಿನಿಧ್ಯ ಕಾಯ್ದೆ, 1951ರ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ವರದಿ ಹೇಳಿದೆ.

## ನಿಧನ



### ನಿಂಗರಡ್ಡಿ ಕೆಂಚರಡ್ಡಿ

ಡಂಬಳ: ಗ್ರಾಮದ ರಡ್ಡಿ ಸಮಾಜದ ಹಿರಿಯರು, ಸಮಾಜ ಸೇವಕರು ಮತ್ತು ವರ್ತಕರಾಗಿದ್ದ ನಿಂಗರಡ್ಡಿ ಬಸವರಡ್ಡಿ ಕೆಂಚರಡ್ಡಿ (56) ಮಂಗಳವಾರ ಮುಂಜಾನೆ ಹೃದಯಘಾತದಿಂದ ನಿಧನರಾಗಿದ್ದಾರೆ. ಮೃತರಿಗೆ ಪತ್ನಿ, ಮೂವರು ಪುತ್ರರು, ಸಹೋದರರು ಹಾಗೂ ಅಪಾರ ಬಂಧು ಬಳಗವಿದೆ.

ಸಂತಾಪ: ವರ್ತಕ ಕೆಂಚರಡ್ಡಿ ಅವರ ನಿಧನಕ್ಕೆ ಕಾಂಗ್ರೆಸ್ ಪಕ್ಷದ ಮುಖಂಡ ಮಿಥುನ್ ಜಿ ಪಾಟೀಲ, ವಿ.ಟಿ.ಮೇಟಿ, ಗೋಣಿಬಸಪ್ಪ ಕೊರ್ಲಹಳ್ಳಿ, ಬೀರಪ್ಪ ಬಂಡಿ, ಸಿ.ಟಿ.ಪ್ಯಾಟಿ, ವಿ.ಎಸ್.ಯರಾಶಿ, ಗವಿಸಿದ್ದಪ್ಪ ಬಿಸನಳ್ಳಿ, ಬಸುರಡ್ಡಿ ಬಂಡಿಹಾಳ, ಬಶೀರಹಮ್ಮದ ತಾಂಬೋಟಿ, ಬಾಬು ಮೂಲಿಮನಿ, ಸಿದ್ದಣ್ಣ ನಂಜಪ್ಪನವರ, ಮುತ್ತಣ್ಣ ಕೊಂತಿಕಲ್ಲ, ಮುದಿಯಪ್ಪ ಸೋಮರಡ್ಡಿ, ನಾಗಪ್ಪ ಚಿಕರಡ್ಡಿ, ಈರಣ್ಣ ಸುಳ್ಳದ, ಮಲ್ಲಿಕಾರ್ಜುನ ಪ್ಯಾಟಿ, ಸೇರಿದಂತೆ ಗ್ರಾಮದ ಹಿರಿಯರು ಸಂತಾಪ ಸೂಚಿಸಿದ್ದಾರೆ.

## ವಿದ್ಯುತ್ ತಂತಿ ಸ್ಪರ್ಶ: ತಂದೆ-ಮಗ ಸಾವು

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ





ತಾಲೂಕಿನ ದುಗ್ಗಾವತಿ ಗ್ರಾಮದ ಹಲಗಿ ರಮೇಶ (38) ಹಾಗೂ ಹಲಗಿ ಚಂದ್ರು (15) ಕುರಿಯನ್ನು ಮೇಯಿಸುತ್ತಾ ಸಮೀಪದ ಶಾಮನೂರು ಶುಗರ್ ಕಾರ್ಖಾನೆಯ ಪಕ್ಕದ ಅಡಿಕೆ ಜಮೀನಿನ ತಂತಿ ಬೇಲಿ ಬಳಿ ಹೋಗಿದ್ದಾಗ ವಿದ್ಯುತ್ ಸ್ಪರ್ಶವಾಗಿ ಇಬ್ಬರೂ ಸಾವನ್ನಪ್ಪಿರುವ ಘಟನೆ ಸಂಭವಿಸಿದೆ.

ರೈತರ ಜಮೀನಿನ ವಿದ್ಯುತ್ ಕಂಬದ ತಂತಿಯ ಮೇಲೆ ಶಾಮನೂರು ಶುಗರ್ ಕಾರ್ಖಾನೆಯ ಸಿಬ್ಬಂದಿಗಳು ಬೇರೊಂದು ದಪ್ಪನೆಯ ಸಿಲ್ವರ್ ತಂತಿಯನ್ನು ಎಸೆದಿದ್ದು, ಉಳಿದ ತಂತಿಯನ್ನು ಜಮೀನಿನ ತಂತಿಬೇಲಿಗೆ ಸುತ್ತಿದ್ದರು. ಆಗತಾನೆ ಮಳೆ ಸುರಿದು ನಿಂತಿದ್ದು, ಭೂಮಿಯು ಹಸಿಯಾಗಿದ್ದರಿಂದ ನೆಲಕ್ಕೆ ವಿದ್ಯುತ್ ಪ್ರವಹಿಸಿ, ಅಲ್ಲಿಯೇ ಇದ್ದ ತಂದೆ-ಮಗ ಇಬ್ಬರೂ ವಿದ್ಯುತ್ ಸ್ಪರ್ಶಿಸಿ ಸಾವನ್ನಪ್ಪಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka